ಪ್ರಜೆಗಳಿಂದ..ಪ್ರಜೆಗಳಿಗೋಸ್ಕರ...

# ಪ್ರಜಾ ನಾಯಕ

# PRAJA NAYAKA

ಕನ್ನಡ ದಿನಪತ್ರಿಕೆ

Kannada Daily

ಸುದ್ದಿ ಜಾಹೀರಾತುಗಳಿಗಾಗಿ ಸಂಪರ್ಕಿಸಿ :
+91 8861879597
+91 7349006694
+91 9945986049
prajanayakadaily@gmail.com
www.prajanayaka.com

ಸಂಪಾದಕರು : ಹೆಚ್.ಬಾಬು

Editor : H.BABU

PRNO.KA/SK/DVG-042/2025-2027 Posted at Jagalur S.O

| | | | | | | | |
|---|---|---|---|---|---|---|---|
| ಸಂಪುಟ: 05 | ಸಂಚಿಕೆ: 62 | RNI.No.KARKAN/2021/81171 | ದಾವಣಗೆರೆ | ದಿನಾಂಕ : 30-10-2025 | ಗುರುವಾರ | ಪುಟ : 04 | ಬೆಲೆ: ರೂ.2-00 |
| Volume :05 | Issue : 62 | RNI.No.KARKAN/2021/81171 | Davanagere | Date : 30-10-2025 | Thuresday | Page : 04 | Price: Rs.2-00 |


## ನವೆಂಬರ್ 1 ರಂದು ಕರ್ನಾಟಕ ರಾಜ್ಯೋತ್ಸವ ತಾಯಿ ಭುವನೇಶ್ವರಿ ಭಾವಚಿತ್ರದೊಂದಿಗೆ ಮೆರವಣಿಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ



**ಪ್ರಜಾನಾಯಕ ದಾವಣಗೆರೆ :**

ಜಿಲ್ಲಾಡಳಿತದ ವತಿಯಿಂದ ನವೆಂಬರ್ 1 ರ ಶನಿವಾರ ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮ ಏರ್ಪಡಿಸಲಾಗಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ, ರಾಜ್ಯೋತ್ಸವ ಸಂದೇಶ ನೀಡುವರು.

ಅಂದು ಬೆಳಿಗ್ಗೆ 8 ಗಂಟೆಗೆ ಹೈಸ್ಕೂಲ್ ಮೈದಾನದಲ್ಲಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮೆರವಣಿಗೆಗೆ ಚಾಲನೆ ನೀಡಲಾಗುವುದು. ಕಲಾ ತಂಡಗಳೊಂದಿಗೆ ಮೆರವಣಿಗೆಯು ಮಹಾನಗರಪಾಲಿಕೆ ಮುಂಭಾಗದಿಂದ ಗಾಂಧಿ ವೃತ್ತ, ಅಶೋಕ ರಸ್ತೆ, ಜಯದೇವ ವೃತ್ತ, ವಿದ್ಯಾರ್ಥಿ ಭವನದ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣದ ತಲುಪಲಿದೆ.

ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ದಕ್ಷಿಣ ವಿಧಾನಸಭಾ ಕ್ಷೇತ್ರ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, 4ನೇ ಪುಟಕ್ಕೆ

# ಜಗಳೂರು ಮುಖ್ಯ ರಸ್ತೆ ವಿಸ್ತರಣೆಗೆ ಸೋಮವಾರ ಗಡುವು : ಎಸಿ ವಾರ್ನಿಂಗ್

## ಕೆಲವೇ ದಿನಗಳಲ್ಲಿ ರಸ್ತೆ ಅಗಲೀಕರಣಕ್ಕೆ ಮೂರ್ತ ಪೀಕ್ಸ್ ಮಾಡಲು ಸಜ್ಜಾದ ತಾಲ್ಲೂಕು ಆಡಳಿತ



### : ರಸ್ತೆ ಅಗಲೀಕರಣದ ಹೈಲೈಟ್ಸ್ :

* ಮಲ್ಪೆ-ಮೊಳಕಾಲ್ಮೂರು ರಾಜ್ಯ ಹೆದ್ದಾರಿಯನ್ನು 69 ಅಡಿ ವಿಸ್ತರಣೆಗೆ ಬದ್ಧ.
* ಕಾಮಗಾರಿಗೆ ಅಡಚಣೆಯಾಗದಂತೆ ಎರಡೂ ಬದಿಗಳಲ್ಲಿ ಅಕ್ರಮವಾಗಿ ತೆರವುಗೊಳಿಸಿ.
* ಅಧಿಕೃತ ಕಟ್ಟಡಗಳು ಇದ್ದರೆ ಎಸ್ಆರ್ ವ್ಯಾಲಿವ್ ಪ್ರಕಾರ ಅಂದಾಜು 100 ಕೋಟಿ ರೂ. ಪರಿಹಾರ
* ಪಟ್ಟಣದಲ್ಲಿ ಒಟ್ಟು 135 ಅನಧಿಕೃತ ಕಟ್ಟಡಗಳಿದ್ದು ಅವು ಪಪಂ ವ್ಯಾಪ್ತಿಗೆ ಬರುತ್ತವೆ.
* ಎರಡು-ಮೂರು ಅಡಿ ಒತ್ತುವರಿ ಮಾಡಿಕೊಂಡ ವರ್ತಕರಿಗೆ ನೋಟಿಸ್ ನೀಡಿ ತೆರವಿಗೆ ಎಸಿ ಗಡುವು
* ಪಿಡ್ಲ್ಯೂಡಿ, ಪಪಂ, ಕಂದಾಯ ಮತ್ತು ಪೊಲೀಸ್ ಇಲಾಖೆ ನೆರವು ಪಡೆದುಕೊಂಡು ಅಧಿಕೃತವಾಗಿ ತೆರವು

**ಪ್ರಜಾನಾಯಕ ದಾವಣಗೆರೆ :**

ಪಟ್ಟಣದ ಮಲ್ಪೆ-ಮೊಳಕಾಲ್ಮೂರು ರಾಜ್ಯ ಹೆದ್ದಾರಿಯನ್ನು 69 ಅಡಿ ವಿಸ್ತರಣೆಗೆ ಸೋಮವಾರದವರೆಗೆ ವರ್ತಕರು ಮತ್ತು ಕಟ್ಟಡದ ಮಾಲೀಕರಿಗೆ ಗಡವು ನೀಡಲಾಗಿದ್ದು, ನಂತರ ಅಧಿಕಾರಿಗಳ ಸಮ್ಮುಖದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್‌ನಲ್ಲಿ ತೆರವು ಕಾರ್ಯ ಮಾಡಲಾಗುವುದು ಎಂದು ದಾವಣಗೆರೆ ಉಪವಿಭಾಗಾಧಿಕಾರಿ (ಎಸಿ)ಸಂತೋಷ್ ಕುಮಾರ್ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ನಂತರ ಪತ್ರಕರ್ತರಿಗೆ ಮಾಹಿತಿ ನೀಡಿದರು. ಈಗಾಗಲೇ ರಸ್ತೆ ವಿಸ್ತರಣೆ ಕಾಮಗಾರಿ ಆರಂಭವಾಗಿದೆ. ಕಾಮಗಾರಿಗೆ ಅಡಚಣೆಯಾಗದಂತೆ ಎರಡೂ ಬದಿಗಳಲ್ಲಿ ಅಕ್ರಮವಾಗಿ ತೆರವುಗೊಳಿಸಲು ಸಭೆ ಕರೆಯಲಾಗಿತ್ತು. ಯಾರು ಅಕ್ರಮವಾಗಿ ರಾಜಕಾಲುವೆ ಮೇಲೆ ಮನೆ ಕಟ್ಟಿಕೊಂಡಿದ್ದಾರೆ ಅಂತಹವರು ಸೋಮವಾರದ ಒಳಗೆ ಸ್ವಯಂ ತೆರವಿಗೆ ಮುಂದಾಗಬೇಕು.

ಈಗಾಗಲೇ ಮೂರು ಬಾರಿ ನೋಟಿಸ್ ನೀಡಿದ್ದೇವೆ. ಆದರೂ ತೆರವುಗೊಳಿಸಿಲ್ಲ. ಹೀಗಾಗಿ ಕಾಮಗಾರಿಗೆ ಅಡಚಣೆ ಉಂಟಾಗುತ್ತಿದೆ. ಪಟ್ಟಣದಲ್ಲಿ ಸಿಕ್ಕಾಪಟ್ಟೆ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ. ಸೋಮವಾರದ ಒಳಗೆ ತೆರವುಗೊಳಿಸಿಕೊಳ್ಳದಿದ್ದರೆ ಪಿಡ್ಲ್ಯೂಡಿ, ಪಪಂ, ಕಂದಾಯ ಮತ್ತು ಪೊಲೀಸ್ ಇಲಾಖೆ ನೆರವು ಪಡೆದುಕೊಂಡು ಅಧಿಕೃತವಾಗಿ ತೆರವು ಕಾರ್ಯಾಚರಣೆಗೆ ಇಳಿಯಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

**ಅಧಿಕೃತ ಕಟ್ಟಡಗಳಿಗೆ ಪರಿಹಾರ:**

ಸರ್ಕಾರಿ ಕಟ್ಟಡವಿರಲಿ, ಖಾಸಗಿ ಕಟ್ಟಡವಿರಲಿ ಅನಧಿಕೃತವಾಗಿದ್ದು ಕಂಡು ಬಂದರೆ ಯಾವುದೇ ಕಾರಣಕ್ಕೂ ಬಿಡುವುದಿಲ್ಲ. ಈಗಾಗಲೇ ಸರ್ಕಾರಿ ಕಟ್ಟಡಗಳನ್ನು ತೆರವುಗೊಳಿಸಲಾಗಿದೆ. ದಾಖಲೆಗಳೆಲ್ಲವೂ ಸರಿ ಇದ್ದು ಎ-ಖಾತ ಹೊಂದಿ, ತೆರಿಗೆ ಕಟ್ಟಿ-ಕೊಂಡು ಬಂದಂತಹ ಮಾಲೀಕರಿಗೆ ಸರ್ಕಾ-ರಿಂದ ಪರಿಹಾರ ಕೊಡಲು ಪ್ರಸ್ತಾವನೆ ಸಿದ್ಧ ಮಾಡಿಕೊಂಡಿದ್ದೇವೆ.

ಅಧಿಕೃತ ಕಟ್ಟಡಗಳು ಇದ್ದರೆ ಎಸ್ಆರ್ ವ್ಯಾಲಿವ್ ಪ್ರಕಾರ ಅಂದಾಜು 100 ಕೋಟಿ ರೂ. ಪರಿಹಾರ ಕೊಡಬೇಕಾಗುತ್ತದೆ. ದಾಖಲೆಗಳು ಸರಿ ಇದ್ದ ಕಟ್ಟಡಗಳಿದ್ದರೆ ಪರಿಹಾರ ಕೊಡುತ್ತೇವೆ. ಒಂದು ವೇಳೆ ಅನಧಿಕೃತ ಕಟ್ಟಡಗಳು ಇದ್ದರೆ ಮುಲಾಜಿಲ್ಲದೇ 69 ಅಡಿ ತೆರವುಗೊಳಿಸುತ್ತೇವೆ ಎಂದು ಪ್ರತಿಕ್ರಿಯೆ ನೀಡಿದರು. ಪಪಂ ಮುಖ್ಯಾಧಿಕಾರಿ ಸಿ.ಲೋಕ್ಯಾನಾಯ್ಕ್, ಪಟ್ಟಣದಲ್ಲಿ ಒಟ್ಟು 135 ಅನಧಿಕೃತ ಕಟ್ಟಡಗಳಿದ್ದು ಅವು ಪಪಂ ವ್ಯಾಪ್ತಿಗೆ ಬರುತ್ತವೆ. ಎರಡು-ಮೂರು ಅಡಿ ಒತ್ತುವರಿ ಮಾಡಿಕೊಂಡ ವರ್ತಕರಿಗೆ ನೋಟಿಸ್ ನೀಡಿ ತೆರವಿಗೆ ಎಸಿ ಗಡುವು ಕೊಟ್ಟಂತೆ ಸೋಮವಾರದ ಒಳಗೆ ತೆರವು ಕಾರ್ಯ ಕೈಗೊಳ್ಳಬೇಕು. ಅಂತಹ ಕಟ್ಟಡಗಳ ಮಾಲೀಕರಿಗೆ ಈಗಾಗಲೇ ನೋಟಿಸ್ ಕೊಟ್ಟಿದ್ದೇವೆ. ಅಧಿಕೃತವಾಗಿ ಸ್ವಂತ ಜಾಗವಾಗಿದ್ದರೆ ಅವರಿಗೆ ಪರಿಹಾರ ನೀಡಿ ತೆರವುಗೊಳಿಸುತ್ತೇವೆ ಎಂದು ಹೇಳಿದರು. ಸಭೆಯಲ್ಲಿ ತಹಶೀಲ್ದಾರ್ ಸೈಯದ್ ಕಲೀಂಉಲ್ಲಾ, ಪಿಡ್ಲ್ಯೂಡಿ ಎಇಇ ನಾಗರಾಜ್, ಎಇ ಪುರುಷೋತ್ತಮರೆಡ್ಡಿ, ಆರ್ಐ ಕೀರ್ತಿಕುಮಾರ ಸೇರಿದಂತೆ ಅನೇಕ ಅಧಿಕಾರಿಗಳು ಇದ್ದರು.

# ಎಸ್ಸಿ ಒಳ ಮೀಸಲಾತಿ ಸಂಬಂಧ ಸರಕಾರ ಮಹತ್ವದ ನಿರ್ಧಾರ




**ಪ್ರಜಾನಾಯಕ ಬೆಂಗಳೂರು :**

ವಿಧಾನಸೌಧದಲ್ಲಿ ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಯ ಅನುಷ್ಠಾನದ ಕುರಿತಂತೆ ಇರುವ ಸಾಧಕ ಬಾಧಕ ಬಗ್ಗೆ ಚರ್ಚೆ ಮಾಡಲಾಗಿದೆ.

ಒಳಮೀಸಲಾತಿ ಅನುಷ್ಠಾನಕ್ಕೆ ಬಿಲ್ ತರಲು ಸರ್ಕಾರ ನಿರ್ಧರಿಸಿದೆ. ಸುಗ್ರೀವಾಜ್ಞೆ ಬದಲಿಗೆ ಬಿಲ್ ತರುವುದಕ್ಕೆ ಸರ್ಕಾರ ಮುಂದಾಗಿದ್ದು, ನಾಳೆ ಸಂಪುಟ ಸಭೆಯಲ್ಲಿ ವಿಧೇಯಕ ಮಂಡಿಸಲು ನಿರ್ಧಾರ ಕೈಗೊಳ್ಳಲಾಗಿದೆ.

**ಒಳ ಮೀಸಲಾತಿ ಸಭೆಯ ಮುಖ್ಯಾಂಶಗಳು :**

ಒಳ ಮೀಸಲಾತಿ ಕುರಿತಾಗಿ ಸಚಿವ ಸಂಪುಟ ಸಭೆಯ ತೀರ್ಮಾನಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುವುದು. ರೋಸ್ಟರ್ ಜಾರಿ ಕುರಿತಾಗಿ ಎಲ್ಲರ ಅಹವಾಲುಗಳನ್ನು ಆಲಿಸಿ, ಯಾವುದೇ ಜಾತಿಗೆ ರೋಸ್ಟರ್‌ನಲ್ಲಿ ಅನ್ಯಾಯವಾಗದಂತೆ ಖಾತ್ರಿಪಡಿಸಲಾಗುವುದು.

ಜಾತಿ ಪ್ರಮಾಣ ಪತ್ರ ಯಾವ ರೀತಿಯಲ್ಲಿ ನೀಡಬೇಕು ಎಂಬ ಕುರಿತು ವಿವರವಾದ ಮಾರ್ಗಸೂಚಿಯನ್ನು ಬಿಡುಗಡೆಗೊಳಿಸಲಾಗಿದೆ.

ನೇಮಕಾತಿಗೆ ಇದ್ದ ನಿರ್ಬಂಧವನ್ನು ತೆರವುಗೊಳಿಸಿದ ಬಳಿಕ ಅಭ್ಯರ್ಥಿಗಳ ವಯೋಮಿತಿಯನ್ನು ಒಂದು ಅವಧಿಗೆ ಹೆಚ್ಚಳ ಮಾಡಲಾಗಿದೆ. ಕೆಇಎಯಲ್ಲಿ ಈಗಾಗಲೇ ನೇಮಕಾತಿ ಅಧಿಸೂಚನೆ ಹೊರಡಿಸಲಾಗಿದೆ.

ಒಳ ಮೀಸಲಾತಿ ಜಾರಿ ಕುರಿತಾಗಿ ಸುಪ್ರೀಂಕೋರ್ಟ್ ನಿರ್ದೇಶನಗಳ ಪ್ರಕಾರ ಕಾಯ್ದೆ ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಒಳಮೀಸಲಾತಿ ಅನುಷ್ಠಾನಕ್ಕೆ ಬಿಲ್ ತರಲು ಸರ್ಕಾರ ನಿರ್ಧಾರ ಎಂದ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ವಿಧಾನ ಸೌಧದಲ್ಲಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪ್ರತಿಕ್ರಿಯಿಸಿದ್ದು, ಒಳ ಮೀಸಲಾತಿ ಅನುಷ್ಠಾನಕ್ಕೆ ಬಿಲ್ ತರಲು ಸರ್ಕಾರ ನಿರ್ಧರಿಸಿದೆ. ನಾಳೆಯ ಕ್ಯಾಬಿನೆಟ್‌ನಲ್ಲಿ ಕರಡು ಬಿಲ್ಗೆ ಮಂಡಿಸಲು ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದರು.

ಅಕ್ಟೋಬರ್ 31ಕ್ಕೆ ಅಲೆಮಾರಿ ಸಮುದಾಯಗಳ ಸಭೆ ಮಾಡುತ್ತೇವೆ. ಬಿಲ್ ಮಾಡುವುದರಿಂದ ಪರಿಣಾಮವಾಗಿರಲಿದೆ. ಸುಪ್ರೀಂಕೋರ್ಟ್ ಆದೇಶದಂತೆ ನಾವು ಒಳ ಮೀಸಲಾತಿ ಮಾಡಿದ್ದೇವೆ. ಇದರ ಅನುಷ್ಠಾನಕ್ಕೆ ಬಿಲ್ ಮಾಡಲು ನಿರ್ಧಾರ ಮಾಡಿದ್ದೇವೆ. ಈಗಾಗಲೇ ಸಂಬಂಧಿಸಿದ ಇಲಾಖೆಗಳ ಜೊತೆಗೆ ಚರ್ಚೆ ಆಗಿದೆ.

ಒಳ ಮೀಸಲಾತಿ ಹೋರಾಟಗಾರ ಮೇಲಿನ ಕೇಸ್ ವಾಪಸ್ ಪಡೆಯುತ್ತೇವೆ ಎಂದು ಹೇಳಿದ್ದಾರೆ.


**ನ್ಯಾಯಾಲಯದಲ್ಲಿ ನಮ್ಮ ಆದೇಶಕ್ಕೆ ತಡೆಯಾಜ್ಞೆ ಇಲ್ಲ:**

ಸಚಿವ ಹೆಚ್ಕೆ ಪಾಟೀಲ್ ಒಳ ಮೀಸಲಾತಿ ಸಭೆ ಬಳಿಕ ಕಾನೂನು ಸಚಿವ ಹೆಚ್ಕೆ ಪಾಟೀಲ್ ಮಾತನಾಡಿದ್ದು, ಒಳ ಮೀಸಲಾತಿಯನ್ನ ಸಮರ್ಪಕವಾಗಿ ಅನುಷ್ಠಾನ ಮಾಡಲು ಸೂಕ್ತ ಪ್ರಾತಿನಿಧ್ಯ ಒದಗಿಸಲು ಕಾನೂನು ಮಾಡುವ ಅಗತ್ಯವಿದೆ.

ಕಾನೂನು ಮಾಡುವ ಬಗ್ಗೆ ಸಭೆಯಲ್ಲಿ ಚರ್ಚೆಯನ್ನ ನಡೆಸಿದ್ದೇವೆ. ನಾಳೆ ಸಂಪುಟ ಸಭೆಯಲ್ಲಿ ಕರಡು ಮಸೂದೆ ಮಂಡಿಸುತ್ತೇವೆ. ಎಲ್ಲರಿಗೂ ಅವಕಾಶ, ನ್ಯಾಯ ಕೊಡಲು ಕಾನೂನು ತರ್ತಿದ್ದೇವೆ. ನ್ಯಾಯಾಲಯದಲ್ಲಿ ನಮ್ಮ ಆದೇಶಕ್ಕೆ ತಡೆಯಾಜ್ಞೆ ಇಲ್ಲ ಎಂದಿದ್ದಾರೆ.

ಈ ಸಭೆಯಲ್ಲಿ ಸಚಿವರಾದ ಜಿ.ಪರಮೇಶ್ವರ್, ಎಚ್.ಸಿ. ಮಹದೇವಪ್ಪ, ಕೆ.ಎಚ್.ಮುನಿಯಪ್ಪ, ಶಿವರಾಜ ತಂಗಡಗಿ, ಎಚ್.ಕೆ.ಪಾಟೀಲ್, ಪ್ರಿಯಾಂಕ್ ಖರ್ಗೆ, ಬಿ.ಆರ್. ತಿಮ್ಮಾಪುರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಅಪರ ಮುಖ್ಯಕಾರ್ಯದರ್ಶಿ ಅಂಜುಂ ಪರ್ವೇಜ್ ಇನ್ನು ಮುಂತಾದ ವರು ಉಪಸ್ಥಿತರಿದ್ದರು.

# ಜಗಳೂರಿನಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರ ತೆರಯಲು ರೈತ ಸಂಘ ಆಗ್ರಹ



**ಪ್ರಜಾನಾಯಕ ಜಗಳೂರು :**

ಮೆಕ್ಕೆಜೋಳ ಬೆಳೆಗೆ ಸರ್ಕಾರ ಬೆಂಬಲ ಬೆಲೆ ಘೋಷಣೆ ಮಾಡಿದೆ. ಇದರ ನಡುವೆ ಮಧ್ಯವರ್ತಿ ಖರೀದಿದಾರರು ರೈತರಿಂದ ಕೇವಲ 1500ರಿಂದ 1800ರೂ ಒಳಗೆ ಖರೀದಿ ಮಾಡಿ ಅನ್ಯಾಯ ಮಾಡುತ್ತಿದ್ದಾರೆ. ಹಾಗಾಗಿ ಸರ್ಕಾರ ಕಟ್ಟುನಿಟ್ಟಿನ ಕ್ರಮಕೈಗೊಂಡು ಖರೀದಿ ಕೇಂದ್ರ ತೆರಬೇಕು ಎಂದು ರೈತ ಸಂಘದ ತಾಲೂಕಾಧ್ಯಕ್ಷ ಸಿ.ಎಂ ಹೊಳೆ ಚಿರಂಜೀವಿ ಒತ್ತಾಯಿಸಿದರು. ಪಟ್ಟಣದ ಪತ್ರಿಕಾಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರಸಕ್ತ ಸಾಲಿನ ಆರಂಭದಲ್ಲಿ ಉತ್ತಮ ಮಳೆಯಾಗಿದ್ದರಿಂದ ಬಹಳ ನಿರೀಕ್ಷೆಯಲ್ಲಿ ರೈತರು ಜಮೀನುಗಳಲ್ಲಿ ಬಿತ್ತನೆ ಮಾಡಿದ್ದರು. ನಂತರ ಉಬ್ಬೆ ಮಳೆಯ ನಂತರ ಸತತ ಎರಡು ತಿಂಗಳು ವರುಣ ಕೈಕೊಟ್ಟಿದ್ದರಿಂದ ಬೆಳೆಗಳ ಬೆಳವಣಿಗೆ ಕುಂಠಿತವಾಗಿದ್ದವು. ಇದರ ನಡುವೆ ಸರ್ಕಾರದೊಂದಿಗೆ ಹೋರಾಟ ಮಾಡಿ ಯೂ-ರಿಯಾ ಗೊಬ್ಬರ ಹಾಕಿದರು ನಿರೀಕ್ಷೆಯಂತೆ ಬೆಳೆ ಕೈಗೆ ಸಿಗಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಈಗ ಬೆಳೆಗಳಿಲ್ಲ ಆದರೆ ಮಳೆ ಬರುತ್ತಿದೆ ಇದ-ರಿಂದ ರೈತರಿಗೆ ಯಾವುದೇ ಪ್ರಯೋಜನವಿಲ್ಲ. ಕೂಲಿ ಬೆಲೆ ದುಬಾರಿಯಾಗಿದೆ ಆದರೆ ಬೆಳೆಗಳ ಬೆಲೆ ಕುಸಿದಿದೆ. ಇದರಿಂದ ರೈತರಿಗೆ ಸಾಲದ ಹೊರೆ ಹೆಚ್ಚಾಗುತ್ತಿದೆ. ತಕ್ಷಣವೇ ಸರ್ಕಾರ ರೈತರಿಗೆ ಅನುಕೂಲವಾದ ಯೋಜನೆಯನ್ನು ಜಾರಿಗೊಳಿಸಬೇಕು. ಉತ್ತಮ ಬೆಲೆ ನೀಡಬೇಕು ಎಂದರು. ಗುರುವಾರದಿಂದ ತಾಲೂಕಿನ ಎಲ್ಲ ಹೋಬಳಿ ಮಟ್ಟದಲ್ಲಿ ರೈತ ಸಂಘದಿಂದ ಚಳುವಳಿಯನ್ನು ಆರಂಭಿಸಲಾಗುವುದು.

ಸರ್ಕಾರ ನಿಗದಿಪಡಿಸಿದ ಬೆಂಬಲ ಬೆಲೆಗೆ ಮೆಕ್ಕೆಜೋಳ ಖರೀದಿ ಮಾಡುವವರೆಗೂ ಹೋರಾಟ ದಿಂದ ಹಿಂದೆ ಸರಿಯುವುದಿಲ್ಲ ಎಂದು ಎಚ್ಚರಿಕೆ ನೀಡಿದರು. ರೈತ ಸಂಘದ ಪ್ರಧಾನ ಕಾರ್ಯದರ್ಶಿ ಬೈರನಾಯಕನಹಳ್ಳಿ ರಾಜು ಮಾತನಾಡಿ, ಸರ್ಕಾರ ಮತ್ತು ತಾಲೂಕು ಆಡಳಿತದಿಂದ ರೈತರಿಗೆ ಯಾವುದೇ ರೀತಿಯ ಸಹಕಾರ ಸಿಗುತ್ತಿಲ್ಲ. ರೈತರು ಬೆಳೆ ನಷ್ಟದಲ್ಲಿದ್ದಾರೆ. ಈಗಾಗಲೇ ವಿಮಾ ಕಂಪನಿಯವರು ಮಾಡುತ್ತಿರುವ ಸರ್ವೇ ಕಾರ್ಯ ಲೋಪವಾಗಿದೆ ಈ ಬಗ್ಗೆ ಜಿಲ್ಲಾಡಳಿತ ಅಥವಾ ತಾಲುಕು ಆಡಳಿತವಾಗಲಿ ಒಮ್ಮೆ ಪರಿಶೀಲನೆ ಮಾಡಿಲ್ಲ. ರೈತರ ಬಗ್ಗೆ ಕಾಳಜಿ ಇಲ್ಲದೆ ಬೇಜವಾಬ್ದಾರಿ ತೋರಿದ್ದಾರೆ ಎಂದು ಆಪಾಧಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡರಾದ ಕ್ಯಾಸೇನಹಳ್ಳಿ ಬಸವರಾಜ್, ಹನುಮಂತಾಪುರ ರಂಗಪ್ಪ, ರಂಗಾಪುರ ಹನುಮಂತಪ್ಪ, ರಾಜಣ್ಣ ಸೇರಿದಂತೆ ಮತ್ತಿತರರಿದ್ದರು.

# ಚಿಕ್ಕಮ್ಮನಟ್ಟಿ ಗ್ರಾಮದ ಪವಾಡ ಪುರುಷ ಶ್ರೀ ಪೂಜಾರಜ್ಜ ಮಹಾಸ್ವಾಮಿಗಳ ಮಹಾದ್ವಾರ ವೀಕ್ಷಣೆ



**ಪ್ರಜಾನಾಯಕ ಜಗಳೂರು :**

ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ.ದೇವೇಂದ್ರಪ್ಪ ಶಾಸಕರಾದ ಬಿ.ದೇವೇಂದ್ರಪ್ಪ ರವರು ತಮ್ಮ ಸ್ವ-ಗ್ರಾಮಕ್ಕೆ ಚಿಕ್ಕಮ್ಮನಟ್ಟಿ ಭೇಟಿ ನೀಡಿ ಗ್ರಾಮದ ಪವಾಡ ಪುರುಷ ಶ್ರೀ ಪೂಜಾರಜ್ಜ ಮಹಾಸ್ವಾಮಿಗಳ ನೂತನವಾಗಿ ನಿರ್ಮಾಣ ವಾಗುತ್ತಿರುವ ಮಹಾದ್ವಾರವನ್ನು ವೀಕ್ಷಣೆ ಮಾಡಿದರು ನಂತರ ತಾಲೂಕಿನ ಬಿಸ್ತವಳ್ಳಿ ಗ್ರಾಮಕ್ಕೆ ಭೇಟಿ ನೀಡಿ, ಅನಾರೋಗ್ಯದಿಂದ ಬಳಲುತ್ತಿರುವ ತಿಪ್ಪೇಸ್ವಾಮಿ ಎಂಬುವರ ಆರೋಗ್ಯವನ್ನು ವಿಚಾರಿಸಿ ಮತ್ತು ಅವರ ಕುಟುಂಬಕ್ಕೆ ಧನ ಸಹಾಯವನ್ನು ಮಾಡಿ,ಧೈರ್ಯ ತುಂಬಿದರು ಇದೇ ವೇಳೆ ಬಿಜೆಪಿ ಯುವ ಮುಖಂಡ ಬಾಬು ಅವರ ಮನೆಗೆ ಭೇಟಿ ನೀಡಿ ಬಿಸ್ತುವಳ್ಳಿ ಗ್ರಾಮದ ಸಮಸ್ಯೆಗಳ ಬಗ್ಗೆ ವಿಚಾರಿಸಿ ಗ್ರಾಮದ ಸಮಗ್ರ ಅಭಿ ವೃದ್ಧಿ ವಿಚಾರವಾಗಿ ಚರ್ಚೆ ನಡೆಸಿದರು

ಈ ಸಂದರ್ಭದಲ್ಲಿ ಬಿಜೆಪಿ ಯುವ ಮುಖಂಡ ಬಿಸ್ತುವಳ್ಳಿ ಬಾಬು. ಲಿಂಗನಹಳ್ಳಿ ಅಜ್ಜಣ್ಣ. ರಂಗೇಗೌಡ, ಹನುಮಂತಪ್ಪ, ಪಿಡಿಒ ವಾಸು, ಕಾಟಪ್ಪ, ಹನುಮಂತಪ್ಪ, ಕರಿಯಪ್ಪ,ಸರ್ಕಲ್ ಕಾಟಪ್ಪ, ಲಿಂಗನಹಳ್ಳಿ ಅಜ್ಜಣ್ಣ ,ಮರೇನಹಳ್ಳಿ ಶೇಖರಪ್ಪ ಗ್ರಾಮದ ಮುಖಂಡರು ಹಾಗೂ ಸೇರಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಇದ್ದರು

# ಆಂಧ್ರ,ಒಡಿಶಾದಲ್ಲಿ ಮೋಂಥಾ ಅಬ್ಬರ

**ಪ್ರಜಾನಾಯಕ ಅಮರಾವತಿ :**

ಆಂಧ್ರಪ್ರದೇಶ ಕರಾವಳಿ ಭಾಗ–ಕ್ಕೆ ಅಪ್ಪಳಿಸಿರುವ ಮೋಂಥಾ ಚಂಡಮಾರುತ ಅಪಾರ ಹಾನಿ ಉಂಟು ಮಾಡಿದೆ. ಚಂಡಮಾರುತದ ಅಬ್ಬರಕ್ಕೆ 1.76 ಲಕ್ಷ ಹೆಕ್ಟೇರ್ ಬೆಳೆ ನಾಶವಾಗಿದೆ.

ಒಡಿಶಾದಲ್ಲೂ ಮೋಂಥಾ ಪರಿಣಾಮ 15 ಜಿಲ್ಲೆಗಳಲ್ಲಿ ಭಾರೀ ಮಳೆ ಸುರಿದಿದ್ದು ಜನಜೀವನ ಅಸ್ತವ್ಯಸ್ತಗೊಂಡಿದೆ.

ಇಂದು ಬೆಳಗಿನ ಜಾವ ಆಂಧ್ರ ಕರಾವಳಿ ತೀರಕ್ಕೆ ಮೋಂಥಾ ಚಂಡಮಾರುತ ಅಪ್ಪಳಿಸಿದ್ದು, ಅದು ಈಗ ದುರ್ಬಲಗೊಂಡಿದೆ.



6 ಗಂಟೆಗಳಲ್ಲಿ ಚಂಡಮಾರುತ ದುರ್ಬಲಗೊಂಡು ವಾಯುವ್ಯ ದಿಕ್ಕಿನತ್ತ ಚಲಿಸಿತು ಎಂದು ಭಾರತೀಯ ಹವಮಾನ ಇಲಾಖೆ ಮಾಹಿತಿ ನೀಡಿದೆ.

ಮುಂದಿನ 6 ಗಂಟೆಗಳಲ್ಲಿ ಚಂಡ ಮಾರುತ ತೀವ್ರತೆಯನ್ನು ಕಾಯ್ದೆಕೊಳ್ಳುವ ಸಾಧ್ಯ ತೆಯಿದ್ದು,6ಗಂಟೆಗಳಲ್ಲಿಆಳವಾದ ವಾಯುವ್ಯಕ್ಕೆ ಚಲಿಸಿ,ದುರ್ಬಲಗೊಳ್ಳುವ ಸಾಧ್ಯತೆಗಳು ಇವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಆಂಧ್ರಪ್ರದೇಶದ ಕೊನಸೀಮಾ ಜಿಲ್ಲೆಯ ಮಕನಗುಡೆಮ್ ಗ್ರಾಮದಲ್ಲಿ ಚಂಡಮಾರುತದಿಂದಾಗಿ ಮಹಿಳೆ ಮೇಲೆ ಮರ ಬಿದ್ದು ಮೃತಪಟ್ಟಿದ್ದಾರೆ.

ಚಂಡಮಾರುತದ ರುದ್ರನರ್ತನಕ್ಕೆ ಆಂಧ್ರಪ್ರದೇಶದಲ್ಲಿ 38 ಸಾವಿರ ಹೆಕ್ಟೇರ್ ಪ್ರದೇಶಗಳಲ್ಲಿ ಬೆಳೆದು ನಿಂತಿದ್ದ ಬೆಳೆಗಳು ಮತ್ತು 1.38 ಲಕ್ಷ ಹೆಕ್ಟೇರ್ ಪ್ರದೇಶಗಳಲ್ಲಿ ತೋಟಗಾರಿಕೆ ಬೆಳೆ ನಾಶವಾಗಿದೆ ಎಂದು ಅಂದಾಜು ಮಾಡಲಾಗಿದೆ.

ಆಂಧ್ರಪ್ರದೇಶದ ನಲ್ಲೂರು ಜಿಲ್ಲೆಯಲ್ಲೂ ಭಾರೀ ಮಳೆ ಸುರಿದಿದ್ದು. 76 ಸಾವಿರ ಜನರನ್ನು ಪರಿಹಾರ ಶಿಬಿರ–ಕ್ಕೆ ಸ್ಥಳಾಂತರಿಸಿ ರಾಜ್ಯ ಸರ್ಕಾರ 219 ವೈದ್ಯಕೀಯ ಶಿಬಿರಗಳನ್ನು ಸ್ಥಾಪಿಸಿದೆ.

ಕೃಷ್ಣ,ಎಲೂರು, ಮತ್ತು ಕಾಕಿನಾಡ ಸೇರಿದಂತೆ ಚಂಡಮಾರುತ ಬಾಧಿತ ಜಿಲ್ಲೆಗಳ ರಸ್ತೆಗಳಲ್ಲಿ ವಾಹನ ಸಂಚಾರ ಸ್ಥಗಿತಗೊಳಿಸಲು ಸರ್ಕಾರ ತೀರ್ಮಾನಿಸಿದೆ. ತುರ್ತುವೈದ್ಯಕೀಯ ಸೇವೆಗಳಿಗೆ ವಿನಾಯಿತಿ ನೀಡಲಾಗಿದೆ. ಪೂರ್ವ ಕರಾವಳಿ ರೈಲ್ವೆ ವಲಯದ ವಾಲ್ಟೇರ್ ವಿಭಾಗದಲ್ಲಿ ಭಾರತೀಯ ರೈಲ್ವೆ ಬಹುತರಬೇತಿ ರೈಲುಗಳನ್ನು ರದ್ದುಪಡಿಸಲಾಗಿದೆ. ಹಾಗೆಯೇ ಕೆಲವು ರೈಲುಗಳ ಸಂಚಾರವನ್ನು ಮರು ನಿಗದಿಮಾಡಿದೆ.

### ವಿಮಾನಗಳ ಹಾರಾಟ ರದ್ದು

ವಿಶಾಖಪಟ್ಟಣ ವಿಮಾನ ನಿಲ್ದಾಣದಿಂದ ಕಾರ್ಯನಿರ್ವಹಿಸುತ್ತಿದ್ದ ಎಲ್ಲಾ 32 ವಿಮಾನಗಳ ಹಾರಾಟವನ್ನು ರದ್ದುಪಡಿಸಲಾಗಿದೆ. ಮತ್ತೊಂದೆಡೆ ವಿಜಯವಾಡ ವಿಮಾನ ನಿಲ್ದಾಣದಿಂದ ಕಾರ್ಯಾಚರಣೆ ನಡೆಸಬೇಕಾಗಿದ್ದ 16 ವಿಮಾನಗಳ ಹಾರಾಟವನ್ನು ರದ್ದುಪಡಿಸಲಾಗಿದೆ. 3778 ಗ್ರಾಮಗಳಲ್ಲಿ ಭಾರೀ ಮಳೆ ಸುರಿಯುವ ಸಾಧ್ಯತೆಯಿದೆ ಎಂದು ಮುಖ್ಯಮಂತ್ರಿ ಚಂದ್ರಬಾಬುನಾಯ್ಡು ತಿಳಿಸಿದ್ದಾರೆ.

ಭಾರತೀಯ ಹವಾಮಾನ ಇಲಾಖೆ ನೀಡಿರುವ ಮಾಹಿತಿ ಆಧರಿಸಿ ಪ್ರಸ್ತುತ ಮಚಲಿಪಟ್ಟಣಂ ಮತ್ತು ವಿಶಾಖಪಟ್ಟಣದಲ್ಲಿರುವ ಡಾಪ್ಲರ್ ಹವಾಮಾನ ರಾಡರ್ ಜೊತೆಗೆ ಕರಾವಳಿ ವಿಕ್ಷಣಾಲಯಗಳು ಸ್ವಯಂಚಾಲಿತ ಹವಾಮಾನ ಕೇಂದ್ರಗಳು, ಹಡಗುಗಳು ಹಾಗೂ ಉಪಗ್ರಹಗಳು ನಿರಂತರವಾಗಿ ಮೇಲ್ವೀಚಾರಣೆ ನಡೆಸುತ್ತಿವೆ.

### ಒಡಿಶಾದಲ್ಲೂ ಮಳೆ

ಒಡಿಶಾ ಮತ್ತು ಕರಾವಳಿ ಮತ್ತು ದಕ್ಷಿಣ ಜಿಲ್ಲೆಗಳಲ್ಲಿ ಮೋಂಥಾ ಚಂಡಮಾರುತ ಪರಿಣಾಮ ಭಾರೀ ಮಳೆಯಾಗಿದೆ. ಭೂಕುಸಿತದಿಂದ ಮನೆಗಳಿಗೆ ಹಾನಿಯಾಗಿದ್ದು, ದಕ್ಷಿಣ ಒಡಿಶಾದ ಮಲ್ಕನ್ ಗಿರಿ, ಕೊರಾಪಟ್, ರಾಯಘಡ, ಗಜಪತಿ, ಗಂಜಾಂ, ಕಂಧಮಲ್, ಕಲಹಂಡಿ ಮತ್ತು ನಬರಂಗ್ ಜಿಲ್ಲೆಗಳಲ್ಲಿ ಹಾನಿಯಾಗಿದೆ. ಈ ಹಿನ್ನೆಲೆಯಲ್ಲಿ 15 ಜಿಲ್ಲೆಗಳಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಮಣ್ಣಿನ ಗೋಡೆ ಕುಸಿದು ಓರ್ವ ವ್ಯಕ್ತಿ ಗಾಯಗೊಂಡಿದ್ದಾನೆ.

ಭಾರೀ ಗಾಳಿಯಿಂದಾಗಿ ಮನೆಯ ಮೇಲ್ಛಾವಣಿ ಹಾರಿಹೋಗಿದೆ. ಮೋಂಥಾ ಚಂಡಮಾರುತ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಪರಿಸ್ಥಿತಿ ಅವಲೋಕನ ನಡೆಸಿ, ಪರಿಹಾರ ಕಾರ್ಯಾಚರಣೆಗಾಗಿ ಎನ್‌ಡಿಆರ್‌ಎಫ್, ಒಡಿಆರ್‌ಎಫ್ ಹಾಗೂ ಅಗ್ನಿಶಾಮಕ ಸಿಬ್ಬಂದಿ ಸೇವೆಯನ್ನು ನಿಯೋಜಿಸಲಾಗಿದೆ.

### ಚಂಡಮಾರುತ ದುರ್ಬಲ

ಆಂಧ್ರ ಪ್ರದೇಶದ ಕರಾವಳಿ ತೀರ–ಕ್ಕೆ ನಿನ್ನೆ ರಾತ್ರಿ ಮೋಂಥಾ ಅಪ್ಪಳಿಸಿದ ನಂತರ ಚಂಡಮಾರುತ ದುರ್ಬಲವಾಗಿದ್ದು ತೀವ್ರ ವಾಯುಭಾರ ಕುಸಿತಗೊಂಡಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ವಾಯುಭಾರ ಕುಸಿತದ ಪರಿಣಾಮವಾಗಿ ಭಾರೀ ಮಳೆ ಮತ್ತು ಬಲವಾದ ಗಾಳಿ ಕಡಿಮೆಯಾಗಿದ್ದು ಮೋಂಥಾ ಅಬ್ಬರ ಕಡಿಮೆಯಾಗಿದೆ. ನಿನ್ನೆ ಸಂಜೆ ಕರಾವಳಿ ರಾಜ್ಯಗಳ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆ ಮತ್ತು ಬಲವಾದ ಗಾಳಿ ಬೀಸಿದ ಹಿನ್ನೆಲೆಯಲ್ಲಿ ತೀವ್ರ ಪರಿಣಾಮ ಎದುರಿಸಿದ ಜನತೆ ನಿಟ್ಟಿಸಿರು ಬಿಡುವಂತಾಗಿದೆ.

"ಆಂಧ್ರಪ್ರದೇಶದ ಕರಾವಳಿಯಲ್ಲಿ ಆರ್ಭಟಿಸಿದ್ದ 'ಮೋಂಥಾ' ಚಂಡಮಾರುತ ವಾಯುವ್ಯ ದಿಕ್ಕಿಗೆ ಸುಮಾರು 10 ಕಿ.ಮೀ ವೇಗದಲ್ಲಿ ಚಲಿಸಿ ದುರ್ಬಲಗೊಂಡಿದೆ . ಸಂಜೆ ವೇಳೆಗೆ ಮತ್ತಷ್ಟು ದುರ್ಬಲಗೊಳ್ಳುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಚಂಡಮಾರುತದ ಕೇಂದ್ರ ನರಸಾಪುರದ ಪಶ್ಚಿಮ–ವಾಯುವ್ಯಕ್ಕೆ ಸುಮಾರು 20 ಕಿಮೀ,ಮಚಲಿಪಟ್ಟಣಂನಿಂದ 50 ಕಿಮೀ ಈಶಾನ್ಯಕ್ಕೆ ಮತ್ತು ಕಾಕಿನಾಡದಿಂದ 90 ಕಿಮೀ ಪಶ್ಚಿಮ–ನೈರುತ್ಯದಲ್ಲಿದೆ. ಮಚಲಿಪಟ್ಟಣಂ ಮತ್ತು ವಿಶಾಖ ಪಟ್ಟಣಂನಲ್ಲಿರುವ ಡಾಪ್ಲರ್ ರಾಡಾರ್‌ಗಳ ಮೂಲಕ ವ್ಯವಸ್ಥೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ.

ಒಳನಾಡಿನಲ್ಲಿ ಚಲಿಸಿ ಶಕ್ತಿ ಕಳೆದುಕೊಳ್ಳಲು ಪ್ರಾರಂಭಿಸಿದ ಕಾರಣ ಚಂಡಮಾರುತದ ದುರ್ಬಲಗೊಳ್ಳುವ ನಿರೀಕ್ಷೆಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪಶ್ಚಿಮ ಗೋದಾವರಿ, ಕೃಷ್ಣ ಮತ್ತು ಪೂರ್ವ ಗೋದಾವರಿ ಜಿಲ್ಲೆಗಳಲ್ಲಿ ಭಾರೀ ಮಳೆ ಮತ್ತು ಬಿರುಗಾಳಿ ಬೀಸುತ್ತಲೇ ಇತ್ತು, ತಗ್ಗು ಪ್ರದೇಶಗಳಲ್ಲಿ ಪ್ರವಾಹ ಉಂಟಾಗುವ ಎಚ್ಚರಿಕೆ ನೀಡಲಾಗಿದೆ.

# ಕ್ರಿಶ್ಚಿಯನ್ ಸಮುದಾಯ ಅಭಿವೃದ್ದಿ ನಿಗಮದ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

**ಪ್ರಜಾನಾಯಕ ದಾವಣಗೆರೆ :**

ಪ್ರಸಕ್ತ ಸಾಲಿಗೆ ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮದ ವತಿಯಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ವೆಬ್ kccdclonline.karnataka.gov.in/portal/ ಮೂಲಕ ನವಂಬರ್ 26 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ, ಕುರುಬರ ಹಾಸ್ಟೆಲ್ ಕಟ್ಟಡ ಜಯದೇವ ಸರ್ಕಲ್ ಹತ್ತಿರ ಹದಡಿ ರಸ್ತೆ ದಾವಣಗೆರೆ–577002, ದೂ.ಸಂ:8277944215 ನ್ನು ಸಂಪರ್ಕಿಸಲು ಇಲಾಖೆಯ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

# ಹೊಯ್ಸಳ ಮತ್ತು ಕಿತ್ತೂರು ರಾಣಿಚೆನ್ನಮ್ಮ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಪ್ರಜಾನಾಯಕ ದಾವಣಗೆರೆ :**

ಪ್ರಸಕ್ತ ಸಾಲಿನ ಮಕ್ಕಳ ದಿನಾಚರಣೆ ಪ್ರಯುಕ್ತ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಮಕ್ಕಳ ಕ್ಷೇತ್ರದಲ್ಲಿ ಸಾಧನೆ ಮಾಡಿದ ವ್ಯಕ್ತಿ, ಸಂಸ್ಥೆಗಳಿಗೆ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ನಿಗದಿತ ಅರ್ಜಿ ನಮೂನೆಗಳನ್ನು ಪಡೆದು ಕನ್ನಡ ಭಾಷೆಯಲ್ಲಿ ಭರ್ತಿಮಾಡಿ ದ್ವಿ ಪ್ರತಿಯಲ್ಲಿ ನವಂಬರ್ 3 ರೊಳಗಾಗಿ ಉಪನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸರ್ಕಾರಿ ಬಾಲಕರ ಬಾಲಮಂದಿರ ಕಟ್ಟಡ, 14ನೇ ಮುಖ್ಯರಸ್ತೆ ಕುವೆಂಪು ನಗರ ಎಂ.ಸಿ.ಸಿ ಬಿ ಬ್ಲಾಕ್ ದವಣಗೆರೆ ದೂ.ಸಂ:08192–264056 ಇವರಿಗೆ ಸಲ್ಲಿಸಬೇಕೆಂದು ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ್ ತಿಳಿಸಿದ್ದಾರೆ.

# ನಾನು ಪಕ್ಷದ ನಿಷ್ಠಾವಂತ ಕಾರ್ಯಕರ್ತ: ಸಂಪುಟ ಪುನಾರಚನೆ

## ಸಿಎಂ ಬದಲಾವಣೆ ಮಾಡುವುದು ಹೈಕಮಾಂಡ್ : ಸಚಿವ ಕೆಎಚ್ ಮುನಿಯಪ್ಪ

**ಪ್ರಜಾನಾಯಕ ಕೋಲಾರ :**

ನಾವೆಲ್ಲರೂ ಒಟ್ಟಾಗಿ ಸೇರಿ ಹೈಕಮಂಡ್ ನಿರ್ಧಾರಕ್ಕೆ ಬದ್ದ ಸಿಎಂ ಸ್ಥಾನ ತೀರ್ಮಾನ ಮಾಡುವುದು ಹೈಕಮಾಂಡ್ ನಾನು ಸಿಎಂಗೆ ರೆಡಿ ಇದ್ದೀನಿ ಎಂದು ಬರೆಯಲು ಅವಕಾಶವಿಲ್ಲ ಸಿಎಂ ಆಗುವ ಆಸೆ ಏನೂ ಇಲ್ಲ ಎಂದು ತಿಳಿಸಿದರು.

ಸಂಪುಟ ಪುನಾರಚನೆ ಹಾಗೂ ಸಿಎಂ ಬದಲಾವಣೆ ಕುರಿತಂತೆ ಕಾಂಗ್ರೆಸ್ ಹೈಕಮಾಂಡ್‌ಗೆ ನಿರ್ಧಾರ ಕೈಗೊಳ್ಳಲಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ಹೇಳಿದ್ದಾರೆ.

ಕೆಎಚ್ ಮುನಿಯಪ್ಪ ಸಿಎಂ ಆದರೆ ಸ್ವಾಗತ ಎಂಬ ಸಚಿವ ಪರಮೇಶ್ವರ್ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಸಚಿವ ಕೆ.ಎಚ್



ಹೈಕಮಾಂಡ್ ನಾನು ಸಿಎಂಗೆ ರೆಡಿ ಇದ್ದೀನಿ ಎಂದು ಬರೆಯಲು ಅವಕಾಶವಿಲ್ಲ ಸಿಎಂ ಆಗುವ ಆಸೆ ಏನೂ ಇಲ್ಲ ಎಂದು ತಿಳಿಸಿದರು.

ಕೆಲವು ದಿನಗಳ ಹಿಂದೆ ಶಿವಮೊಗ್ಗದಲ್ಲಿ, ಮುನಿಯಪ್ಪ ಅವರ ಬೆಂಬಲಿಗರು ಮುನಿಯಪ್ಪ ಅವರನ್ನು ಮುಂದಿನ ಮುಖ್ಯಮಂತ್ರಿ ಎಂದು ಬಿಂಬಿಸುವ ಘೋಷಣೆಗಳನ್ನು ಕೂಗಿದ್ದರು. ಇದಕ್ಕೆ ಪ್ರತಿಕ್ರಿಯೆಯಾಗಿ, ಗೃಹ ಸಚಿವ ಜಿ. ಪರಮೇಶ್ವರ ಅವರು ಮುನಿಯಪ್ಪ ಹಿರಿಯ ನಾಯಕರು ಮತ್ತು ಏಳು ಬಾರಿ ಸಂಸತ್ತಿಗೆ ಆಯ್ಕೆಯಾಗಿದ್ದಾರೆ ಎಂದು ಹೇಳಿದ್ದರು. ಕೋಲಾರಕ್ಕೆ ಖಾಸಗಿ ಭೇಟಿ ನೀಡಿದ ಸಂದರ್ಭದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರು ತಮ್ಮ ಉತ್ತಮ ಅಭಿವೃದ್ಧಿ ಕಾರ್ಯಗಳನ್ನು ಮುಂದುವರಿಸುವುದಾಗಿ ಹೇಳಿದ್ದಾರೆ ಎಂದು ಮುನಿಯಪ್ಪ ಹೇಳಿದರು.

ಸತೀಶ್ ಜಾರಕಿಹೊಳಿ ಅವರ ಬೆಂಬಲಿಗರು ಮುಂದಿನ ಸಿಎಂ ಆಗಿ ಅವರ ಹೆಸರನ್ನು ಒತ್ತಾಯಿಸುತ್ತಿದ್ದಾರೆ ಎಂದು ಗಮನಕ್ಕೆ ತಂದಾಗ, ಮುನಿಯಪ್ಪ ಅವರು ನಿಷ್ಠಾವಂತ ಕಾಂಗ್ರೆಸ್ ಕಾರ್ಯಕರ್ತ ಎಂದು ಹೇಳಿದರು.

ಶೀಘ್ರದಲ್ಲೇ ಚಿತ್ರದುರ್ಗಕ್ಕೆ ತೆರಳಿ ಅಲ್ಲಿನ ಎಲ್ಲಾ ಸಮುದಾಯದ ನಾಯಕರನ್ನು ಭೇಟಿ ಮಾಡುವುದಾಗಿ ಹೇಳಿದರು.

ಪಕ್ಷದಲ್ಲಿ ಯಾವುದೇ ಗೊಂದಲವಿಲ್ಲ, 136 ಶಾಸಕರಿದ್ದಾರೆ ಮತ್ತು ಅವರೆಲ್ಲರೂ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಉತ್ಸುಕರಾಗಿದ್ದಾರೆ, ಆದರೆ ಬೆಳಗಾದ್ರೆ ದಾರಿತಪ್ಪಿಸುವ ಕೆಲಸ ನಡೆಯುತ್ತಿದೆ ಎಂದಿದ್ದಾರೆ.

# ಹಾವು ಕಚ್ಚಿಸಿಕೊಂಡು ಕಾಲು ಕಳೆದುಕೊಂಡ ರೈತ ಕೃಷ್ಣಪ್ಪನವರ ಸಾಮಾಜಿಕ ಸೇವೆ ಶ್ಲಾಘನೀಯ

**ಪ್ರಜಾನಾಯಕ ಚಿತ್ರದುರ್ಗ :**

40 ವರ್ಷಗಳ ಹಿಂದೆ ಹಾವಿನಿಂದ ಕಚ್ಚಿಸಿಕೊಂಡು ಬಲಗಾಲನ್ನು ಕಳೆದುಕೊಂಡ ರೈತ



ಯುವಕ ಟಿ.ಜಿ. ಕೃಷ್ಣಪ್ಪ ಇಂದು ವಿಶ್ರಾಂತಿಗಾಗಿ ಸರ್ಕಾರಿ ವಿಜ್ಞಾನ ಕಾಲೇಜಿನ ಆವರಣದಲ್ಲಿರುವ ಅರಳಿ ಕಟ್ಟೆಯ ಮೇಲೆ ಕುಳಿತು, ಸ್ವಲ್ಪ ಮಟ್ಟಿಗೆ ವಿದ್ಯಾರ್ಥಿಗಳ ಜೊತೆ ಸ್ನೇಹ ಸಂಪಾದಿಸಿಕೊಂಡು ಹೋಗುವಾಗ, ಕಟ್ಟೆ ಸುತ್ತಮುತ್ತ ಇರುವ ಗಲೀಜನ್ನು, ಕಸವನ್ನು, ಮರದ ಎಲೆಗಳನ್ನು ಕಸಬರಕೆಯಿಂದ ಗುಡಿಸಿ, ಸ್ವಚ್ಛಗೊಳಿಸಿ ಹೋಗುತ್ತಿರುವುದು ಇತರ ವಿದ್ಯಾರ್ಥಿಗಳಿಗೆ ಮಾದರಿಯಾಗಿ ನಿಂತಿದ್ದಾರೆ.

ಕಾಲು ಕಳೆದುಕೊಂಡ ನೋವಿನಲ್ಲೂ ಸಹ ಸಾಮಾಜಿಕ ಸೇವೆ ಮಾಡಬೇಕೆಂಬ ಇವರ ಭಾವನೆ ವಿದ್ಯಾರ್ಥಿಗಳಿಗೆ ಮಾದರಿಯಾಗಿದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದರು.

ಅವರು ಚಿತ್ರಕ ನಗರದ ಕೇಂದ್ರ ಭಾಗದಲ್ಲಿರುವ ಪ್ರತಿಷ್ಠಿತ ಸರ್ಕಾರಿ ವಿಜ್ಞಾನ ಕಾಲೇಜಿನ ಆವರಣದಲ್ಲಿ ಅರಳಿಯಕಟ್ಟೆ ಮೇಲೆ ವಿಶ್ರಾಂತಿಗೆಂದು ಬಂದು ಕುಳಿತ ಹಿರಿಯ ನಾಗರಿಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಉದ್ದೇಶಿಸಿ ಸಾಮಾಜಿಕ ಸೇವೆ ಮಾಡಲು ಅಂಗವೈಕಲ್ಯಾ ಕಾರಣವಾಗಬಾರದು ಎಂದು ಮಾತನಾಡುತ್ತಿದ್ದರು.

40 ವರ್ಷಗಳ ಹಿಂದೆ ರೈತರಾಗಿ ಹುಲ್ಲಿನ ಬವಣೆಯನ್ನು ಒಟ್ಟುವಾಗ ಬವಣೆಯ ಕೆಳಗಡೆ ಇದ್ದ ಕೊಳಕುಮಂಡಲ ಹಾವನ್ನ ತುಳಿದು, ಅದರಿಂದ ಕಚ್ಚಿಸಿಕೊಂಡು, ಜ್ಞಾನ ತಪ್ಪಿ ಬಿದ್ದು, ಅವರನ್ನು ಆಸ್ಪತ್ರೆಗೆ ತೆಗೆದು–ಕೊಂಡು ಹೋಗದೆ, ಯಾವುದೋ ಮಂತ್ರವಾದಿಯ ಬಳಿ ಕರೆದು–ಕೊಂಡು ಹೋಗಿ, ವಿಷ ತೆಗೆಯುವ ನೆಪದಲ್ಲಿ ವಿಷ ಜಾಸ್ತಿಯಾಗಿ, ಕಾಲು ಕೊಳೆತು ಕಾಲನ್ನ ಕತ್ತರಿಸಿ, ಕೃತಕ ಕಾಲನ್ನು ಜೋಡಿಸಿರುವ ಕೃಷ್ಣಪ್ಪನವರ ಬದುಕು ಕಷ್ಟಕರವಾಗಿದ್ದು, ಅದನ್ನು ನಿಭಾಯಿಸುವಲ್ಲಿ ಅವರ ಮನಸ್ಸು ದೃಢವಾಗಿತ್ತು ಎಂದರು.

40 ವರ್ಷಗಳಲ್ಲೂ ಸಹ ಕೃತಕ ಕಾಲನ್ನು ಧರಿಸಿ ಕುಂ–ಟೆ ಹೊಡೆಯುವುದು, ನೇಗಿಲು ಹೊಡೆಯುವುದು, ಹೊಲದಲ್ಲಿ ಕೆಲಸ ಮಾಡುವುದು, ಬವಣೆ ಹಾಕುವುದು, ಎತ್ತಿನಗಾಡಿ ಓಡಿಸುವುದು, ಮುಂತಾದ ಕೆಲಸಗಳನ್ನು ಮಾಡಿ, ಮಕ್ಕಳನ್ನು ಸಾಕಿ ವಿದ್ಯಾವಂತರನ್ನಾಗಿ ಮಾಡಿ, ಈಗ ತುರುವನೂರಿನಿಂದ ಚಿತ್ರದುರ್ಗಕ್ಕೆ ಮಗನ ಮನೆಯಲ್ಲಿ ವಾಸವಾಗಿರಲು ಬಂದು, ಮನೆಯಲ್ಲಿ ಕುಳಿತು ಸಮಯ ವ್ಯರ್ಥ ಮಾಡಲಾರದೆ, ಸರ್ಕಾರಿ ವಿಜ್ಞಾನ ಕಾಲೇಜಿನ ಆವರಣದಲ್ಲಿರುವ ಕಟ್ಟೆಯ ಮೇಲೆ ಕುಳಿತು, ಓದುವ ವಿದ್ಯಾರ್ಥಿಗಳನ್ನ, ಸಾರ್ವಜನಿಕರನ್ನ ಗಮನಿಸುತ್ತಾ ತಾನೊಂದಿಷ್ಟು ಕೈಲಾದಷ್ಟು ಸೇವೆ ಮಾಡಬೇಕು ಎಂಬ ಅವಕಾಶ ಹುಡುಕುತ್ತಿರುವ ಇಂತಹ ವ್ಯಕ್ತಿಗಳನ್ನು ನಾವು ಗುರುತಿಸಬೇಕಾಗಿದೆ ಎಂದರು.


ಸಾಕಷ್ಟು ಜನ ವಿಜ್ಞಾನ ಕಾಲೇಜಿನ ಆವರಣದಲ್ಲಿರುವ ಕಟ್ಟೆಯ ಮೇಲೆ ವಿಶ್ರಾಂತಿಗಾಗಿ, ವ್ಯಾಯಾಮಕ್ಕಾಗಿ ಯೋಗಕ್ಕಾಗಿ ಹಿರಿಯ ನಾಗರಿಕರು, ಯುವಕರು, ಪೋಷಕರು ಬಂದು ಕುಳಿತು ವಿಶ್ರಮಿಸಿಕೊಂಡು, ಕಾಲೇಜಿನಲ್ಲಾಗುತ್ತಿರುವ ಬದಲಾವಣೆಗಳು, ವಿದ್ಯಾರ್ಥಿಗಳ ಮನಸ್ಸಿನಲ್ಲಿ ಆಗುತ್ತಿರುವ ಯೋಚನೆಗಳನ್ನು ಅರ್ಥಮಾಡಿಕೊಂಡು, ತಮ್ಮ ಕಾಲದ ಜೊತೆ ಹೊಂದಿಸಿಕೊಂಡು, ಕಾಲ ಎಷ್ಟು ಬದಲಾಗಿದೆ ಎಂಬುದನ್ನು ಅರಿತುಕೊಂಡು, ವಿದ್ಯಾರ್ಥಿಗಳಿಗೆ ಸರಿದಾರಿ ತರಲು ಪ್ರಯತ್ನಿಸಬೇಕು ಎಂಬ ಮನಸ್ಸಿನಲ್ಲಿ ಸಾಕಷ್ಟು ಪ್ರಯತ್ನಗಳನ್ನ ಮಾಡುತ್ತಿರುವ ಇಂತ ಹಿರಿಯರು, ಕುಳಿತ ಜಾಗವನ್ನು ಸ್ವಚ್ಛ ಮಾಡಿಕೊಂಡು, ಕಸಬರಕ್ಕೆ ಕೈಯಲ್ಲಿ ಹಿಡಿದು, ಕಸಗುಡಿಸಿ ಇತರ ವಿದ್ಯಾರ್ಥಿಗಳಿಗೆ ಮಾದರಿಯಾಗಿದ್ದಾರೆ ಎಂದರು. ವಿಶ್ರಾಂತಿ ಕಟ್ಟೆ ಮೇಲೆ ಕಾಡು ಹೊರಟೆ ಮಾಡಿಕೊಂಡು, ಮೊಬೈಲ್ನಲ್ಲಿ ಕಬ್ಜಿ ಗೇಮ್ ಗಳನ್ನು ಆಟವಾಡಿಕೊಂಡು, ಯುವ ಜನಾಂಗ ಕೆಟ್ಟದಾಗಿ ನಡೆದುಕೊಂಡು, ಕೆಟ್ಟ ಭಾಷೆಗಳನ್ನ ಬಳಸಿಕೊಂಡು, ಒಬ್ಬರನ್ನೊಬ್ಬರು ನಿಂದಿಸುತ್ತಾ, ಹೀಯಾಳಿಸುತ್ತಾ, ಹೆಣ್ಣು ಮಕ್ಕಳ ಬಗ್ಗೆ ಕೀಳಾದ ಮಾತುಗಳನ್ನು ಆಡುವುದನ್ನು ಕಿವಿಯಲ್ಲಿ ಕೇಳಿಸಿಕೊಂಡ ತಕ್ಷಣ ಈ ಹಿರಿಯರು, ಆ ವಿದ್ಯಾರ್ಥಿಗಳಿಗೆ ಬುದ್ಧಿ ಮಾತನ್ನ ಹೇಳಿ, ವಿದ್ಯಾರ್ಥಿಗಳ ಜೀವನವನ್ನು ಸರಿದಾರಿಗೆ ತೆಗೆದುಕೊಂಡು ಹೋಗಲು ಪ್ರಯತ್ನಿಸುತ್ತಿರುವುದು ಸಮಾಜಕ್ಕೆ ಮಾದರಿಯಾಗಿದ್ದಾರೆ ಎಂದರು.

ಯುವ ಜನಾಂಗ ಏಸ್ ನಲ್ಲಿ ಕಸ ಹೊಡೆಯುವಾಗಲೇ ಮುಜುಗರದಿಂದ ಕಸ ಹೊಡೆಯುವ ವಿದ್ಯಾರ್ಥಿಗಳಿಗೆ, ಈ ಹಿರಿಯ ನಾಗರಿಕರು ಸ್ವತಹ ಅಂಗವಿಕಲವಿದ್ದರೂ ಸಹ, ಕೃತಕ ಕಾಲನ ಧರಿಸಿ, ಕೈಯಲ್ಲಿ



ಕೋಲು ಹಿಡಿದು, ಎಡಗೈಯಲ್ಲಿ ಕೋಲು ಹಿಡಿದು, ಆಸರೆಗಾಗಿ ಎಡಗೈಯಲ್ಲಿ ಕೋಲು ಹಿಡಿದು, ಬಲಗೈಯಲ್ಲಿ ಪರಕೆ ತೆಗೆದುಕೊಂಡು ಕಟ್ಟೇ ಸುತ್ತಮುತ್ತಲಿರುವ ಕಸದ ರಾಶಿಯನ್ನ, ಎಲೆಗಳ ರಾಶಿಯನ್ನ ಒಟ್ಟುಗೂಡಿಸಿ, ಸ್ವಚ್ಛಗೊಳಿಸಿ ಹೋಗುವಂತ ದೃಶ್ಯ ಪ್ರತಿಯೊಬ್ಬರಿಗೂ ಪಾಠವಾಗಿ ನಿಲ್ಲುತ್ತದೆ ಎಂದರು.

ತಾವು ಕುಳಿತ ಸ್ಥಳದ ಸುತ್ತಮುತ್ತ ಸ್ವಚ್ಛಗೊಳಿಸಿ, ಸ್ವಲ್ಪಮಟ್ಟಿಗೆ ವಿಶ್ರಾಂತಿ ಪಡೆದು ಮತ್ತೆ ತಮ್ಮ ಮನೆಗಳಿಗೆ ಹಿಂದಿರುವ ಇಂತಹ ನೂರಾರು ಹಿರಿಯರು, ಈ ಕಾಲೇಜಿನ ಆವರಣದಲ್ಲಿ ಬಂದು ಹೋಗುವ ದೃಶ್ಯ ಸರ್ವೇಸಾಮಾನ್ಯವಾಗಿದೆ. ಹಾಗಾಗಿ ವಿದ್ಯಾರ್ಥಿಗಳು, ಹಿರಿಯರು ಸಮ್ಮುಖದಲ್ಲಿ ಸನ್ನಡತೆಗಳನ್ನು ರೂಡಿಸಿಕೊಂಡು, ಮುಂದಿನ ದೇಶವನ್ನ ಸುಭದ್ರವಾಗಿ ಕಟ್ಟಲು ಪ್ರಯತ್ನಿಸಬೇಕು ಎಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.



# ಯಶಸ್ಸನ್ನು ತಡೆಯುವ ಆ ಮೂರು ಭಯಗಳು ! ಇದು ಚಾಣಕ್ಯ ನೀತಿ

## ಟೀಕೆಗಳಿಂದ ಓಡಿಹೋಗಬೇಡಿ,ಕಷ್ಟಗಳಿಗೆ ಅಂಜಬೇಡಿ,ಧೈರ್ಯ ಮತ್ತು ಆತ್ಮವಿಶ್ವಾಸ ಅತ್ಯಗತ್ಯ

ಆಚಾರ್ಯ ಚಾಣಕ್ಯ ನೀತಿ ಪ್ರಕಾರ, ಜೀವನದಲ್ಲಿ ಯಶಸ್ಸು ಸಾಧಿಸಲು ಕೆಲವು ಭಯಗಳನ್ನು ಮೆಟ್ಟಿ ನಿಲ್ಲಬೇಕು. ಈ ತತ್ವಗಳು ಇಂದಿಗೂ ಯಶಸ್ಸಿನ ಹಾದಿಯಲ್ಲಿ ಮಾರ್ಗದರ್ಶಿಯಾಗಿವೆ.

ಆಚಾರ್ಯ ಚಾಣಕ್ಯ ಅವರನ್ನು ಇತಿಹಾಸದ ಶ್ರೇಷ್ಠ ವಿದ್ವಾಂಸ, ಕೌಶಲ್ಯಪೂರ್ಣ ರಾಜಕಾರಣಿ, ಅತ್ಯುತ್ತಮ ಶಿಕ್ಷಕ ಮತ್ತು ನೀತಿ ನಿರೂಪಕ ಎಂದು ಪರಿಗಣಿಸಲಾಗಿದೆ. ಅವರ ಚಾಣಕ್ಯ ನೀತಿ ಜೀವನದ ಪ್ರತಿಯೊಂದು ಅಂಶಕ್ಕೂ ಆಳವಾದ ಪಾಠಗಳನ್ನು ಒಳಗೊಂಡಿದೆ. ಅವರ ವಿಚಾರಗಳು ಆಧುನಿಕ ಜೀವನದಲ್ಲೂ ಪ್ರಸ್ತುತವಾಗಿವೆ ಮತ್ತು ಎಲ್ಲರಿಗೂ ಸ್ಫೂರ್ತಿ ನೀಡುತ್ತಲೇ ಇವೆ. ಅವರ ತತ್ವಗಳು ರಾಜಕೀಯ ಮತ್ತು ಆಡಳಿತದಲ್ಲಿ ಮಾರ್ಗದರ್ಶನ ನೀಡುವುದಲ್ಲದೆ, ಯಶಸ್ವಿ ಜೀವನಕ್ಕೆ ಅಮೂಲ್ಯವಾದ ತತ್ವಗಳನ್ನು ಸಹ ಒದಗಿಸುತ್ತವೆ. ಚಾಣಕ್ಯನು ತನ್ನ ಜೀವನ ಅನುಭವಗಳ ಮೂಲಕ ನೀಡಿದ ಪಾಠಗಳು ಇಂದಿಗೂ ಪ್ರಸ್ತುತವಾಗಿವೆ.

ಅವರ ಆಲೋಚನೆಗಳು ಯಶಸ್ಸನ್ನು ಕಠಿಣ ಪರಿಶ್ರಮದಿಂದ ಮಾತ್ರವಲ್ಲ, ಸರಿಯಾದ ಆಲೋಚನೆ, ಧೈರ್ಯ ಮತ್ತು ಆತ್ಮವಿಶ್ವಾಸದಿಂದಲೂ ಸಾಧಿಸಬಹುದು ಎಂದು ತೋರಿಸುತ್ತವೆ. ಒಬ್ಬ ವ್ಯಕ್ತಿ ತನ್ನ ಗುರಿಯನ್ನು ತಲುಪುವುದನ್ನು ತಡೆಯುವ ಕೆಲವು ಅಭ್ಯಾಸಗಳು ಮತ್ತು ಭಯಗಳಿವೆ. ಚಾಣ–ಕ್ಯ ನೀತಿಯ ಪ್ರಕಾರ, ನೀವು ಜೀವನದಲ್ಲಿ ಯಶಸ್ಸನ್ನು ಸಾಧಿಸಲು ಬಯಸಿದರೆ ತಪ್ಪಿಸಬೇಕಾದ ಕೆಲವು ಸಂಗತಿಗಳಿವೆ. ಮುಖ್ಯವಾಗಿ ಟೀಕೆ. ಟೀಕೆಗಳಿಗೆ ಹೆದರಬಾರದು.

### 1. ಟೀಕೆಗಳಿಂದ ಓಡಿಹೋಗಬೇಡಿ

ಚಾಣಕ್ಯರ ಪ್ರಕಾರ, ಒಬ್ಬ ವ್ಯಕ್ತಿಯು ಟೀ–ಕೆಗೆ ಹೆದರಿ ಒಂದು ಕೆಲಸವನ್ನು ತಪ್ಪಿಸಿದರೆ, ಅವನು ಎಂದಿಗೂ ಪ್ರಗತಿ ಸಾಧಿಸಲು ಸಾಧ್ಯವಿಲ್ಲ. ಟೀಕೆಗೆ ಹೆದರುವುದೇ ಯಶಸ್ಸಿಗೆ ದೊಡ್ಡ ಅಡಚಣೆಯಾಗಿದೆ. ಟೀಕೆ ಎಂಬುದು ಒಂದು ಅವಕಾಶ ಎಂದು ಚಾಣಕ್ಯ ನಂಬಿದ್ದರು. ಅದು ನಮ್ಮ ದೌರ್ಬಲ್ಯಗಳನ್ನು ಬಹಿರಂಗಪಡಿಸುತ್ತದೆ ಮತ್ತು ಸುಧಾರಣೆಗೆ ಅವಕಾಶವನ್ನು ಒದಗಿಸುತ್ತದೆ. ಆದ್ದರಿಂದ, ನೀವು ಜೀವನದಲ್ಲಿ ಯಶಸ್ವಿಯಾಗಲು ಬಯಸಿದರೆ, ಟೀಕೆಗಳಿಂದ ಓಡಿಹೋಗುವ ಬದಲು ಅದರಿಂದ ಕಲಿಯಿರಿ. ಚೌಕಟ್ಟಿನ ಹೊರಗೆ ಯೋಚಿಸುವವರು ಹೊಸ ಮಾರ್ಗಗಳನ್ನು ಸೃಷ್ಟಿಸುತ್ತಾರೆ ಮತ್ತು ಇತರರಿಗೆ ಸ್ಫೂರ್ತಿಯಾಗುತ್ತಾರೆ.

### 2. ಕಷ್ಟಗಳಿಗೆ ಅಂಜಬೇಡಿ

ಕಷ್ಟಗಳಿಂದ ಓಡಿಹೋಗುವುದು ಯಶಸ್ಸನ್ನು ದೂರ ಮಾಡುತ್ತದೆ. ಜೀವನದಲ್ಲಿ ಕಷ್ಟಗಳನ್ನು ಎದುರಿಸುವುದು ಸಹಜ. ಕಷ್ಟಗಳು ನಿಜವಾಗಿಯೂ ವ್ಯಕ್ತಿಯ ಧೈರ್ಯ ಮತ್ತು ತಾಳ್ಮೆಯನ್ನು ಪರೀಕ್ಷಿಸುತ್ತವೆ ಎಂದು ಆಚಾರ್ಯ ಚಾಣಕ್ಯ ಹೇಳಿದ್ದಾರೆ. ನೀವು ಸವಾಲುಗಳನ್ನು ಎದುರಿಸಲು ಹಿಂಜರಿದ–ರೆ, ನೀವು ಎಂದಿಗೂ ನಿಮ್ಮ ಗುರಿಯನ್ನು ತಲುಪಲು ಸಾಧ್ಯವಿಲ್ಲ. ಚಾಣಕ್ಯ ನೀತಿ ಹೇಳುವಂತೆ ಕಷ್ಟಗಳು ನಮ್ಮ ಶಕ್ತಿಯನ್ನು ಪರೀಕ್ಷಿಸುತ್ತವೆ ಮತ್ತು ನಮ್ಮನ್ನು ಬಲಪಡಿಸುತ್ತವೆ. ಕಠಿಣ ಸಂದರ್ಭಗಳನ್ನು ಎದುರಿಸುವವರು ಇನ್ನಷ್ಟು ಪ್ರಕಾಶಮಾನವಾಗಿ ಹೊಳೆಯುತ್ತಾರೆ. ಪ್ರತಿಯೊಂದು ಸವಾಲಿನಿಂದ ಓಡಿಹೋಗುವವರು ಜೀವನದಲ್ಲಿ ಎಂದಿಗೂ ಪ್ರಗತಿ ಹೊಂದುವುದಿಲ್ಲ.

### 3. ಧೈರ್ಯ ಮತ್ತು ಆತ್ಮವಿಶ್ವಾಸ ಅತ್ಯಗತ್ಯ

ಯಶಸ್ಸಿಗೆ ಕೇವಲ ಯೋಜನೆ ಹಾಕಿಕೊಳ್ಳುವುದಕ್ಕಿಂತ ಹೆಚ್ಚಿನದು ಬೇಕು. ಅದನ್ನು ಕಾರ್ಯಗತಗೊಳಿಸುವ ಧೈರ್ಯವೂ ಬೇಕು ಎಂದು ಚಾಣಕ್ಯ ನಂಬಿದ್ದರು. ಅಪಾಯಗಳನ್ನು ಎದುರಿಸದೆ, ದೊಡ್ಡ ಯಶಸ್ಸನ್ನು ಸಾಧಿಸುವುದು ಅಸಾಧ್ಯ. ಜನಸಂದಣಿಯಿಂದ ಹೊರಗುಳಿಯುವ ಧೈರ್ಯವಿರುವವರು ಇತಿಹಾಸವನ್ನು ಸೃಷ್ಟಿಸುತ್ತಾರೆ ಎಂದು ಅವರು ಹೇಳಿದರು. ಭಯ ಮತ್ತು ಹಿಂಜರಿಕೆಯನ್ನು ಬಿಟ್ಟು ಬರುವವರು ಮಾತ್ರ ತಮ್ಮ ಕನಸುಗಳನ್ನು ಸಾಧಿಸಬಹುದು.

ಆಚಾರ್ಯ ಚಾಣಕ್ಯರ ತತ್ವಗಳು ಇಂದಿಗೂ ಯಶಸ್ಸನ್ನು ಬಯಸುವ ಯಾರಿಗಾದರೂ ಮಾರ್ಗದರ್ಶಿಯಾಗಿ ಕಾರ್ಯನಿರ್ವಹಿಸುತ್ತವೆ.

ಟೀಕೆಗಳಿಗೆ ಹೆದರಬೇಡಿ, ಕಷ್ಟಗಳಿಂದ ಓಡಿಹೋಗಬೇಡಿ ಮತ್ತು ಧೈರ್ಯದಿಂದ ಮುಂದುವರಿಯಿರಿ ಎಂಬುದು ಅವರ ಸ್ಪಷ್ಟ ಸಂದೇಶವಾಗಿದೆ. ಈ ತತ್ವಗಳನ್ನು ಜಾರಿಗೆ ತರುವವರಿಗೆ, ಯಶಸ್ಸು ಕೇವಲ ಗುರಿಯಾಗಿರುವುದಿಲ್ಲ, ಆದರೆ ಜೀವನದ ವಾಸ್ತವವಾಗುತ್ತದೆ.

# ಹಾಸಿಗೆ,ದಿಂಬು ಕೋರಿ ದರ್ಶನ್ ಅರ್ಜಿ
# ಹೊರಬಿತ್ತು ಕೋರ್ಟ್ ಆದೇಶ


ಸಾಂಧರ್ಭಿಕ ಚಿತ್ರ : ದರ್ಶನ್ ರವರನ್ನು ಜೈಲಿಗೆ ಕರೆದೊಯ್ಯುತ್ತಿರುವುದು.

ರೇಣುಕಾ ಸ್ವಾಮಿ ಕೊಲೆ ಆರೋಪಿ ನಟ ದರ್ಶನ್ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದು, ತಮಗೆ ಮಲಗಲು ಹೆಚ್ಚುವರಿ ಹಾಸಿಗೆ ಮತ್ತು ದಿಂಬು ಬೇಕೆಂದು ಮನವಿ ಮಾಡಿದ್ದರು. ಜೈಲಧಿಕಾರಿಗಳು ಹೆಚ್ಚುವರಿ ಹಾಸಿಗೆ–ದಿಂಬು ನೀಡಲು ನಿರಾಕರಿಸಿದ ಕಾರಣ ದರ್ಶನ್ ಕೋರ್ಟ್ ಮೆಟ್ಟಿಲೇರಿದ್ದರು.

ಕೆಲ ದಿನಗಳ ಹಿಂದೆ ನಡೆದ ವಾದದ ಸಮಯದಲ್ಲಿ ನಟ ದರ್ಶನ್ ಪರ ವಕೀಲರು, ಜೈಲಧಿಕಾರಿಗಳು ಕೋರ್ಟ್ ಆದೇಶವನ್ನು ಉಲ್ಲಂಘಿಸಿದ್ದಾರೆ.

ದರ್ಶನ್ ಅವರಿಗೆ ಹೆಚ್ಚುವರಿ ಹಾಸಿಗೆ, ದಿಂಬು, ಬೆಡ್ಶೀಟ್ ನೀಡಿಲ್ಲ ಎಂದು ವಾದಿಸಿದ್ದರು. ಅರ್ಜಿಯ ಬಗ್ಗೆ ಹಲವು ಬಾರಿ ವಾದ–ಪ್ರತಿವಾದಗಳು ನಡೆದಿದ್ದವು, ಜೈಲಿಗೆ ಕಾನೂನು ಪ್ರಾಧಿಕಾರ ಸದಸ್ಯರು ಭೇಟಿ ನೀಡಿ ಪರಿಶೀಲನೆಯನ್ನೂ ಮಾಡಿದ್ದರು. ವಾದಗಳನ್ನು ಆಲಿಸಿದ್ದ ನ್ಯಾಯಾಧೀಶರು ಆದೇಶವನ್ನು ಕಾಯ್ದಿರಿಸಿದ್ದರು. ಇಂದು (ಅಕ್ಟೋಬರ್ 29) ಆದೇಶ ಹೊರಬಿದ್ದಿದೆ.

ರೇಣುಕಾ ಸ್ವಾಮಿ ಕೊಲೆ ಆರೋಪಿ ದರ್ಶನ್ ಅವರಿಗೆ ತಿಂಗಳಿಗೊಮ್ಮೆ ಹಾಸಿಗೆ, ಬಟ್ಟೆಗಳನ್ನು ಒದಗಿಸುವಂತೆ ನ್ಯಾಯಾಲಯ ಆದೇಶಿಸಿದೆ.ಮತ್ತೊಬ್ಬ ಆರೋಪಿ ಪವಿತ್ರಾ ಅವರಿಗೂ ಇದೇ ಆದೇಶ ಅನ್ವಯ ಆಗಲಿದೆ. ಆದರೆ ದರ್ಶನ್ ಕೇಳಿದಂತೆ ದಿಂಬು, ಕನ್ನಡಿ, ಬಾಚಣಿಗೆ ಹಾಗೂ ಇನ್ನಿತರೆ ಸೌಲಭ್ಯಗಳು ಅವರಿಗೆ ಸಿಕ್ಕಿಲ್ಲ. ಈ ಹಿಂದೆ ದರ್ಶನ್ ಹಾಗೂ ಇತರೆ ಆರೋಪಿಗಳ ಜಾಮೀನು ರದ್ದು ಮಾಡಿದ್ದ ಸುಪ್ರೀಂಕೋರ್ಟ್,ದರ್ಶನ್ ಹಾಗೂ ಇತರೆ ಆರೋಪಿಗಳಿಗೆ ವಿಶೇಷ ಸೌಲಭ್ಯ ನೀಡದಂತೆ ಸೂಚಿಸಿತ್ತು. ಅದರಂತೆ ಜೈಲಧಿಕಾರಿಗಳು ದರ್ಶನ್ಗೆ ಯಾವುದೇ ಸೌಲಭ್ಯಗಳನ್ನು ನೀಡಿರಲಿಲ್ಲ. ಹಾಗಾಗಿ ದರ್ಶನ್ ನ್ಯಾಯಾಲಯದ ಮೊರೆ ಹೋಗಿದ್ದರು. ಆದರೆ ನ್ಯಾಯಾಲಯದ ಈಗಿನ ಆದೇಶದಿಂದ ದರ್ಶನ್ಗೆ ಪೂರ್ಣ ಸಂತುಷ್ಟಿ ಸಿಕ್ಕಂತಿಲ್ಲ.

ತಮ್ಮನ್ನು ಬೇರೆ ಬ್ಯಾರಕ್ಗೆ ಸಹ ಸ್ಥಳಾಂತರ ಮಾಡುವಂತೆಯೂ ಸಹ ದರ್ಶನ್ ಕೇಳಿಕೊಂಡಿದ್ದರು. ಆದರೆ ಈ ಅಧಿಕಾರವನ್ನು ಜೈಲಧಿಕಾರಿಗಳಿಗೆ ನ್ಯಾಯಾಲಯ ನೀಡಿದೆ. ದರ್ಶನ್ ಅನ್ನು ಬೇರೆ ಬ್ಯಾರಕ್ಗೆ ಸ್ಥಳಾಂತರಿಸುವ ನಿರ್ಣಯವನ್ನು ಜೈಲಧಿಕಾರಿಗಳು ಕೈಗೊಳ್ಳಲಿ ಎಂದಿದೆ ನ್ಯಾಯಾಲಯ. ದರ್ಶನ್ ಅವರು ಈಗಿರುವ ಬ್ಯಾರಕ್ನಲ್ಲಿ ಬೆಳಕು ಬರುವುದಿಲ್ಲ. ಬಿಸಿಲು ಕಾಣದೆ ಫಂಗಸ್ ಆಗಿದೆ ಎಂದು ಆರೋಪಿಸಿದ್ದರು. ಆದರೆ ದರ್ಶನ್ ಭದ್ರತೆ ದೃಷ್ಟಿಯಿಂದ ಬೇರೆ ಬ್ಯಾರಕ್ಗೆ ಅವರನ್ನು ಸ್ಥಳಾಂತರ ಮಾಡಿಲ್ಲ ಎಂದು ಜೈಲಧಿಕಾರಿಗಳು ನ್ಯಾಯಾಲಯಕ್ಕೆ ತಿಳಿಸಿದ್ದರು.

01 ಪವಿತ್ರಾಗೌಡ, 02 ದರ್ಶನ್ ಸೇರಿ 6 ಆರೋಪಿಗಳು ಇಂದಿನ ವಿಚಾರಣೆಗೆ ಹಾಜರಾಗಿದ್ದರು.ಈ ವೇಳೆ ಶೀಘ್ರ ಸಾಕ್ಷ್ಯ ವಿಚಾರಣೆ ಕೋರಿ ಪ್ರಾಸಿಕ್ಯೂಷನ್ ಹಾಕಲಾಗಿದ್ದ ಅರ್ಜಿಯ ಬಗ್ಗೆ, ಸಾಕ್ಷ್ಯ ವಿಚಾರಣೆಗೆ 2 ಕಡೆಯವರು ಸಹಕರಿಸುವಂತೆ ಕೋರ್ಟ್ ಸೂಚನೆ ನೀಡಿತು.


ಇದರ ಜೊತೆಗೆ ತಮ್ಮನ್ನು ಆರೋಪದಿಂದ ಕೈಬಿಡುವಂತೆ ಐದನೇ ಆರೋಪಿ ನಂದೀಶ್ ಅರ್ಜಿ ಹಾಕಿದ್ದ, ಆದರೆ ಆ ಅರ್ಜಿಯನ್ನು ನ್ಯಾಯಾಲಯ ವಜಾ ಮಾಡಿದೆ.

ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಮೊದಲ ಬಾರಿ ಬಂಧಿತರಾಗಿದ್ದ ದರ್ಶನ್ ಅವರು ಪರಪ್ಪನ ಅಗ್ರಹಾರ ಜೈಲಿನಲ್ಲಿ ವಿಶೇಷ ಸೌಲಭ್ಯಗಳನ್ನು ಪಡೆದಿದ್ದರು. ದರ್ಶನ್, ಇತರೆ ಕೆಲವು ಆರೋಪಿಗಳ ಜೊತೆಗೆ ಕೂತು ಜೈಲಿನಲ್ಲಿಯೇ ಸಿಗರೇಟು ಕುಡಿಯುತ್ತಿರುವ ಫೋಟೊ ವೈರಲ್ ಆಗಿತ್ತು. ಬಳಿಕ ಜೈಲಿನಿಂದ ವಿಡಿಯೋ ಕಾಲ್ ಮಾಡಿದ್ದ ವಿಡಿಯೋ ಸಹ ವೈರಲ್ ಆಗಿತ್ತು. ಬಳಿಕ ಅವರನ್ನು ಬಳ್ಳಾರಿ ಜೈಲಿಗೆ ವರ್ಗಾಯಿಸಲಾಗಿತ್ತು.

ಬಳಿಕ ಅವರು ಆರೋಗ್ಯದ ಕಾರಣ ನೀಡಿ ಜಾಮೀನು ಪಡೆದು ಹೊರಗೆ ಬಂದಿದ್ದರು. ಸುಪ್ರೀಂಕೋರ್ಟ್ ಜಾಮೀನು ರದ್ದು ಮಾಡಿದ ಕಾರಣ ಈಗ ಮತ್ತೆ ಜೈಲು ಸೇರಿದ್ದಾರೆ. ಪ್ರಸ್ತುತ ಪರಪ್ಪನ ಅಗ್ರಹಾರ ಜೈಲಿನಲ್ಲಿ ದರ್ಶನ್ ಸಮಯ ದೂಡುತ್ತಿದ್ದಾರೆ.

# ಮೈಕ್ರೋಸಾಫ್ಟ್–ಓಪನ್ AI ನಡುವೆ ಒಪ್ಪಂದ

**ಪ್ರಜಾನಾಯಕ ವಾಷಿಂಗ್ಟನ್ :** ಕೃತಕ ಬುದ್ಧಿಮತ್ತೆ (ಎಐ) ಜಗತ್ತಿನಲ್ಲಿ ಒಂದು ಮಹತ್ವದ ಬೆಳವಣಿಗೆ ಸಂಭವಿಸಿದೆ.ಮೈಕ್ರೋಸಾಫ್ಟ್ ಮತ್ತು ಓಪನ್ಎಐ ಐತಿಹಾಸಿಕ ಒಪ್ಪಂದವನ್ನು ಮಾಡಿಕೊಂಡಿದ್ದು, ಓಪನ್ಎಐನಲ್ಲಿ ಶೇ. 27 ರಷ್ಟು ಪಾಲನ್ನು ಪಡೆದುಕೊಂಡಿವೆ. ಈ ಒಪ್ಪಂದವು ಕೇವಲ ಹಣಕಾಸಿನ ವಹಿವಾಟಲ್ಲ, ಬದಲಾಗಿ ಎಐನ ಭವಿಷ್ಯವನ್ನು ರೂಪಿಸುವ ಮಹತ್ವದ ಹೆಜ್ಜೆಯಾಗಿದೆ.




ಈ ಒಪ್ಪಂದದಡಿಯಲ್ಲಿ, ಮೈಕ್ರೋಸಾಫ್ಟ್ 2032 ರವರೆಗೆ ಓಪನ್ಎಐನ ಎಲ್ಲಾ ಇತ್ತೀಚಿನ ತಂತ್ರಜ್ಞಾನಗಳಿಗೆ ನೇರ ಪ್ರವೇಶವನ್ನು ಹೊಂದಿರುತ್ತದೆ.ಈ ಒಪ್ಪಂದವು ಸಾಮಾನ್ಯವಾದದ್ದಲ್ಲ. ಹೊಸ ಒಪ್ಪಂದದ ಪ್ರಕಾರ, ಮೈಕ್ರೋಸಾಫ್ಟ್ ಓಪನ್ಎಐನಲ್ಲಿ ಶೇ. 27 ಪಾಲನ್ನು ಸ್ವಾಧೀನಪಡಿಸಿಕೊಳ್ಳಲಿದ್ದು, ಇದರ ಮಾರುಕಟ್ಟೆ ಮೌಲ್ಯ $135 ಬಿಲಿಯನ್ ಎಂದು ಅಂದಾಜಿಸಲಾಗಿದೆ. ಆದರೆ ಒಪ್ಪಂದವು ಹಣಕಾಸಿನ ವಹಿವಾಟಿಗೆ ಸೀಮಿತವಾಗಿಲ್ಲ. ಈ ಒಪ್ಪಂದದ ಪ್ರಮುಖ ಅಂಶವೆಂದರೆ ಮೈಕ್ರೋಸಾಫ್ಟ್ 2032 ರವರೆಗೆ ಓಪನ್ಎಐನ ಎಲ್ಲಾ ಇತ್ತೀಚಿನ ತಂತ್ರಜ್ಞಾನಗಳಿಗೆ ನೇರ ಪ್ರವೇಶವನ್ನು ಪಡೆಯುತ್ತದೆ. ಇದರಲ್ಲಿ ಆರ್ಟಿಫಿಶಿಯಲ್ ಜನರಲ್ ಇಂಟೆಲಿಜೆನ್ಸ್ (ಎಜಿಐ) ನಂತಹ ತಂತ್ರಜ್ಞಾನಗಳು ಸೇರಿವೆ, ಇದನ್ನು ಎಐನ ಮುಂದಿನ ಮತ್ತು ಅತ್ಯಂತ ಮುಂದುವರಿದ ರೂಪವೆಂದು ಪರಿಗಣಿಸಲಾಗಿದೆ. ಎಜಿಐಯ ಗುರಿ ಮಾನವರಂತೆ ಯೋಚಿಸುವ ಮತ್ತು ಕಲಿಯಬಲ್ಲ ಯಂತ್ರಗಳನ್ನು ರಚಿಸುವುದು. ಇದು ಮೈಕ್ರೋಸಾಫ್ಟ್ಗೆ ಒಂದು ಮಹತ್ವದ ಹೆಜ್ಜೆಯಾಗಿದ್ದು, ಮುಂಬರುವ ವರ್ಷಗಳಲ್ಲಿ ತಂತ್ರಜ್ಞಾನ ಕ್ಷೇತ್ರದಲ್ಲಿ ತನ್ನ ಸ್ಥಾನವನ್ನು ಮತ್ತಷ್ಟು ಬಲಪಡಿಸುತ್ತದೆ. ಈ ಸುದ್ದಿಯ ನಂತರ, ಮಾರುಕಟ್ಟೆಯೂ ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿತು ಮತ್ತು ಮೈಕ್ರೋಸಾಫ್ಟ್ ಷೇರುಗಳು 4.2% ರಷ್ಟು ಏರಿಕೆಯಾಗಿ $553.72 ಕ್ಕೆ ತಲುಪಿದವು.

ಓಪನ್ಎಐ ಈಗ ಅಧಿಕೃತವಾಗಿ ಸಾಂಪ್ರದಾಯಿಕ ಲಾಭರಹಿತ ಕಂಪನಿಯಾಗಿದೆ.

ಆದರೆ, ಕಂಪನಿಯ ಅಧ್ಯಕ್ಷ ಬ್ರೆಟ್ ಟೇಲರ್ ಅವರು ಹಿಂದಿನ ಲಾಭರಹಿತ ಘಟಕವು ಇನ್ನೂ ಲಾಭರಹಿತ ಘಟಕದ ಒಂದು ಭಾಗದ ನಿಯಂತ್ರಣವನ್ನು ಉಳಿಸಿಕೊಳ್ಳುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ. ಈ ಸಂಪೂರ್ಣ ಪುನರ್ರಚನೆ ಪ್ರಕ್ರಿಯೆಯಲ್ಲಿ ಅತ್ಯಂತ ಆಶ್ಚರ್ಯಕರ ವಿಷಯವೆಂದರೆ ಕಂಪನಿಯ ಸಿಇಒ ಮತ್ತು ಸಹ–ಸಂಸ್ಥಾಪಕ ಸ್ಯಾಮ್ ಆಲ್ಟ್ಮನ್ ಅವರಿಗೆ ಈ ಹೊಸ ಒಪ್ಪಂದದಲ್ಲಿ ಯಾವುದೇ ವೈಯಕ್ತಿಕ ಪಾಲನ್ನು ನೀಡಲಾಗಿಲ್ಲ.ಅಧ್ಯಕ್ಷ ಬ್ರೆಟ್ ಟೇಲರ್ ಅವರ ಪ್ರಕಾರ, ಈ ಪುನರ್ರಚನೆಯ ಮುಖ್ಯ ಉದ್ದೇಶ ಎಜಿಐನಂತಹ ದುಬಾರಿ ತಂತ್ರಜ್ಞಾನಗಳ ಅಭಿವೃದ್ಧಿಗಾಗಿ ದೊಡ್ಡ ಸಂಪನ್ಮೂಲಗಳಿಗೆ ನೇರ ಮಾರ್ಗ ವನ್ನು ಸೃಷ್ಟಿಸುವುದಾಗಿದೆ ಮತ್ತು ಈ ಹೆಜ್ಜೆಯನ್ನು ಆ ದಿಕ್ಕಿನಲ್ಲಿ ಇಡಲಾಗಿದೆ

# ಸಿದ್ದು ಪೂರ್ಣಾವಧಿ ಸಿಎಂಗೆ ಒತ್ತಾಯ




**ಪ್ರಜಾನಾಯಕ ಮೈಸೂರು:**


ರಾಜ್ಯ ರಾಜಕಾರಣದಲ್ಲಿ ನವೆಂಬರ್ ಕ್ರಾಂತಿ, ನಾಯಕತ್ವ ಬದಲಾವಣೆ ಹಾಗೂ ಸಂಪುಟಪುನ ರಚನೆ ಕುರಿತಾಗಿ ಭಾರಿ ಚರ್ಚೆಗಳು ನಡೆಯುತ್ತಿವೆ.

ಇದರ ಬೆನ್ನಲ್ಲೆ ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ಬೆಂಬಲಿಸಿ ಪೂರ್ಣಾವಧಿ ಸಿಎಂ ಎಂದು ಘೋಷಿಸಬೇಕು ಎಂದು ಒತ್ತಾಯಿಸಲಾಗಿದೆ. ಈ ಸಂಬಂಧ ಅಹಿಂದ ಸಂಘಟನೆಗಳು ಪತ್ರ ಚಳುವಳಿ ಆರಂಭಿಸಿದ್ದು, ಕಾಂಗ್ರೆಸ್ ಹೈ ಕಮಾಂಡ್ ಗೆ ಪತ್ರ ಬರೆಯಲಾಗಿದೆ. ಮೈಸೂರಿನಲ್ಲಿ ರಾಮಸ್ವಾಮಿ ಮೃತದಲ್ಲಿ ಅಹಿಂದ ಒಕ್ಕೂಟದಿಂದ ಈ ಒಂದು ಪತ್ರ ಚಳವಳಿ ಆರಂಭಿಸಿದ್ದು ಗೊಂದಲಗಳಿಗೆ ತೆರೆ ಎಳೆಯುವಂತೆ ಒತ್ತಾಯಿಸಲಾಯಿತು. ಯಾರು ಮುಂದಿನ ಸಿಎಂ ಆಗ್ತಾರೆ, ಸಿಎಂ ರೇಸ್ ನಲ್ಲಿ ಯಾರು ಇದ್ದಾರೆ ಎಂದು ಸಾಕಷ್ಟು ಗೊಂದಲಗಳು ಮೂಡಿದ್ದು ಇವೆಲ್ಲಾ ಗೊಂದಲಗಳಿಗೆ ತೆರೆ ಎಳೆಯಬೇಕು.

ಹಾಗೆಯೇ ಸಿದ್ದರಾಮಯ್ಯ ಅವರನ್ನು ಪೂರ್ಣಾವಧಿ ಸಿಎಂ ಎಂದು ಘೋಷಿಸಿ ಎಂದು ರಾಹುಲ್ ಗಾಂಧಿಗೆ ಪತ್ರದಲ್ಲಿ ಕೋರಲಾಗಿದೆ.

# ಕನ್ನೇರಿ ಶ್ರೀಗಳ ಅರ್ಜಿ ವಜಾ

**ಪ್ರಜಾ ನಾಯಕ ನವದೆಹಲಿ :** ಕೊಲ್ಲಾಪುರದ ಕನ್ನೇರಿ ಮಠದ ಶ್ರೀ ಕಾಡಸಿದ್ದೇಶ್ವರ ಸ್ವಾಮೀಜಿಗೆ ವಿಜಯಪುರ ಜಿಲ್ಲೆ ಪ್ರವೇಶಿಸದಂತೆ ಜಿಲ್ಲಾ ಆಡಳಿತ ನಿರ್ಬಂಧ ವಿಚಾರಕ್ಕೆ ಸಂಬಂಧಿಸಿದಂತೆ ಕನ್ನೇರಿ ಶ್ರೀಗಳು ಸಲ್ಲಿಸಿದ ಮೇಲ್ಮನವಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾ ಗೊಳಿಸಿದೆ.



ವಿಚಾರಣೆ ವೇಳೆ ಕನ್ನೆರಿ ಮಠದ ಸ್ವಾಮೀಜಿ ಕೀಳುಮಟ್ಟದ ಹೇಳಿಕೆ ನೀಡಿರುವುದು ಸರಿಯಲ್ಲ ಎಂದು ನ್ಯಾಯಮೂರ್ತಿಗಳಾದ ಪಂಕಜ್ ಮಿತ್ತಲ್ ಹಾಗೂ ಪ್ರಸನ್ನ ವರಾಲೆ ಅವರನ್ನೊಳಗೊಂಡ ಪೀಠ ಸ್ವಾಮೀಜಿಯನ್ನು ತರಾಟೆ ತೆಗೆದುಕೊಂಡಿತು. ಪ್ರಚೋದನಕಾರಿ ಹೇಳಿಕೆ ನೀಡಿರುವುದು ನಿಮ್ಮ ಘನತೆಗೆ ತಕ್ಕುದಲ್ಲ ಎಂದು ಕನ್ನೇರಿ ಶ್ರೀಗಳ ವಿರುದ್ಧ ಚಾಟಿ ಬೀಸಿದೆ.

ವಿಚಾರಣೆ ವೇಳೆ, ಹೈಕೋರ್ಟ್ ಹೇಳಿರುವುದರಲ್ಲಿ ತಪ್ಪೇನಿದೆ ಎಂದು ಸುಪ್ರೀಂ ಕೋರ್ಟ್ ಪ್ರಶ್ನಿಸಿತು. ನೀವು ಸ್ವಾಮೀಜಿಯಾಗಿ ಗಂಭೀರವಾಗಿರಬೇಕು. ನೀವು ಒಳ್ಳೆಯ ಪ್ರಜೆಯಲ್ಲ. ಅವಹೇಳನಕಾರಿ ಭಾಷೆ ಬಳಸಿದ್ದೀರಿ. ವಾಕ್ ಸ್ವಾತಂತ್ರ್ಯ ವ್ಯಾಪ್ತಿಯಲ್ಲಿಲ್ಲ. ನೀವು ಮಾತನಾಡುವುದು ನಿಲ್ಲಿಸಿ ಮೌನವಾಗಿ ಬೇರೆ ಮಠದಲ್ಲಿ ಧ್ಯಾನ ಮಾಡಿ ಎಂದು ಸೂಚಿಸಿದೆ..

# ಪಿಡಿಒ ಕಿರುಕುಳ ಲೈಬ್ರೆರಿಯನ್ ಆತ್ಮಹತ್ಯೆ

**ಪ್ರಜಾನಾಯಕ ಬೆಂಗಳೂರು :**

ಪಂಚಾಯತಿ ಅಭಿವೃದ್ಧಿ ಅಧಿಕಾರಿ(ಪಿಡಿಒ)ಯ ಕಿರುಕುಳಕ್ಕೆ ಬೇಸತ್ತು ಪಂಚಾಯತಿ ಲೈಬ್ರೆರಿಯನ್ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾಗಿರುವ ದುರ್ಘಟನೆ ನೆಲಮಂಗಲ ತಾಲೂಕಿನ ಕಳಲುಘಟ್ಟ ಪಂಚಾಯತ್ ವ್ಯಾಪ್ತಿಯಲ್ಲಿ ನಡೆದಿದೆ.



ಗ ್ರಾ ಪ ಂ ಪಂಚಾಯತಿ ಲೈಬ್ರೆರಿಯನ್ ಆಗಿದ್ದ ರಾಮಚಂದ್ರಯ್ಯ ಆತ್ಮಹತ್ಯೆಗೆ ಶರಣಾದವರು, ಕಳೆದ 25 ವರ್ಷದಿಂದ ಅರೆಕಾಲಿಕ ಗ್ರಂಥಾಲಯ ಮೇಲ್ವಿಚಾರಕರಾಗಿ ಕೆಲಸ ಮಾಡುತ್ತಿದ್ದರು, ನೆಲಮಂಗಲ ತಾಲೂಕಿನ ಕಳಲುಘಟ್ಟ ಗ್ರಾಮ ಪಂಚಾಯತಿ ಪಿಡಿಒ ಗೀತಾಮಣಿ ವಿರುದ್ಧ ಕಿರುಕುಳ ಆರೋಪ ಕೇಳಿ ಬಂದಿದೆ.


ಕಳೆದ ಮೂರು ತಿಂಗಳಿಂದ ಸಂಬಳ ನೀಡದೇ ಕಿರುಕುಳ ನೀಡುತ್ತಿದ್ದರು. ಜೊತೆಗೆ ಬಯೋಮೆಟ್ರಿಕ್ ಹಾಜರಾತಿ ಹಾಕದೇ, ಇಲ್ಲಸಲ್ಲದ ಕಾರಣ ಹೇಳಿ ನೀಡುತ್ತಿದ್ದ ಕಿರುಕುಳಕ್ಕೆ ಬೇಸತ್ತು ವಿಷ ಸೇವಿಸಿ ಒದ್ದಾಡುತ್ತಿದ್ದ ರಾಮಚಂದ್ರಯ್ಯ ಅವರನ್ನು ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೇ ತುಮಕೂರು ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

ಈ ಸಂಬಂಧ ಮೃತ ರಾಮಚಂದ್ರಯ್ಯ ಅವರ ಅಣ್ಣನ ಮಗ ಪೊಲೀಸ್ ಠಾಣೆಯಲ್ಲಿ ದೂರು ನೀಡಿ ದಾಖಲಿಸಿದ್ದು, ದೂರಿನನ್ವಯ ಪಿಡಿಓ ಗೀತಾಮಣಿ ವಿರುದ್ಧ ಎಫ್ಐಆರ್ ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಳ್ಳಲಾಗಿದೆ.

# ವಿದ್ಯುತ್ ತಂತಿ ಸ್ಪರ್ಶಿಸಿ ತಾಯಿ–ಮಗ ಸಾವು

**ಪ್ರಜಾನಾಯಕ ಮೈಸೂರು:**

ಹುಣಸೂರು ತಾಲ್ಲೂಕಿನ ಕಪ್ಪನಾಯನ ಕಾಲೋನಿ, ಎಮ್ಮೆಕೊಪ್ಪಲು ಗ್ರಾಮದಲ್ಲಿ ಹೃದಯವಿದ್ರಾವಕ ಘಟನೆ ನಡೆದಿದ್ದು, ವಿದ್ಯುತ್ ಆಘಾತದಿಂದ ತಾಯಿ ಮತ್ತು ಮಗ ಸಾವನ್ನಪ್ಪಿದ್ದಾರೆ. ಮೃತರನ್ನು ತಾಯಿ ನೀಲಮ್ಮ (42) ಮತ್ತು




ಮಗ ಹರೀಶ್ (24) ಎಂದು ಗುರುತಿಸಲಾಗಿದೆ.

ತಮ್ಮ ಜಮೀನಿನಲ್ಲಿ ಬೆಳೆದಿದ್ದ ಜೋಳವನ್ನು ಪರಿಶೀಲಿಸಲು ಹೋಗುತ್ತಿದ್ದಾಗ ತಾಯಿ ಮತ್ತು ಮಗ ವಿದ್ಯುತ್ ಸ್ಪರ್ಶಿಸಿ ಸಾವನ್ನಪ್ಪಿದ್ದಾರೆ. ಜಮೀನಿನ ಬಳಿಯ ಬೇಲಿಯ ಬಳಿ ಬಿದ್ದಿದ್ದ ವಿದ್ಯುತ್ ತಂತಿ ಮೊದಲು ಹರೀಶ್ ಗೆ ತಗುಲಿದೆ. ಅವರು ನೋವಿನಿಂದ ಬಳಲುತ್ತಿರುವುದನ್ನು ನೋಡಿದ ತಾಯಿಯೂ ಅವರನ್ನು ರಕ್ಷಿಸಲು ಪ್ರಯತ್ನಿಸುತ್ತಿದ್ದಾಗ ವಿದ್ಯುತ್ ಆಘಾತಕ್ಕೊಳಗಾಗಿದ್ದಾರೆ. ಪರಿಣಾಮವಾಗಿ ಇಬ್ಬರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ವಿದ್ಯುತ್ ಇಲಾಖೆಯ ನಿರ್ಲಕ್ಷ್ಯವೇ ವಿದ್ಯುತ್ ಆಘಾತಕ್ಕೆ ಕಾರಣ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ ಮತ್ತು ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರವನ್ನು ಕೋರಿದ್ದಾರೆ. ಹುಣಸೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.

# ನ.6 ರಂದು ಕೈಗಾರಿಕಾ ಸ್ಪಂದನ ಸಭೆ



**ಪ್ರಜಾನಾಯಕ ದಾವಣಗೆರೆ :**

ಜಿಲ್ಲೆಯ ಕೈಗಾರಿಕಾ ಘಟಕಗಳ ಕೈಗಾರಿಕೋದ್ಯಮಿಗಳ ಕುಂದು ಕೊರತೆ ಹಾಗೂ ಕೈಗಾರಿಕೆಗಳ ಇತರೆ ಸಮಸ್ಯೆಗಳ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನವೆಂಬರ್ 6 ರ ಬೆಳಗ್ಗೆ 11 ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ಕೈಗಾರಿಕಾ ಸ್ಪಂದನ ಸಭೆ" ಆಯೋಜಿಸಲಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಫೆಲ್‌ನಲ್ಲಿ ರಾಷ್ಟ್ರಪತಿ ಮುರ್ಮು ಹಾರಾಟ
## ರಾಷ್ಟ್ರಪತಿಗಳು ರಫೇಲ್‌ನಲ್ಲಿ ಹಾರಾಟ ನಡೆಸಿದ್ದು ಮೊದಲು

**ಪ್ರಜಾ ನಾಯಕ ನವದೆಹಲಿ :** ರಾಷ್ಟ್ರಪತಿ ದ್ರೌಪದಿ ಮುರ್ಮು ಬುಧವಾರ ಬೆಳಿಗ್ಗೆ ಹರಿಯಾಣದ ಅಂಬಾಲಾ ವಾಯುಪಡೆ ನಿಲ್ದಾಣದಿಂದ ರಫೇಲ್ ವಿಮಾನದಲ್ಲಿ ಹಾರಾಟ ನಡೆಸಿದ್ದಾರೆ .



ರಫೇಲ್ ವಿಮಾನ ಹತ್ತುವುದಕ್ಕೆ ಮುನ್ನ ರಾಷ್ಟ್ರಪತಿಗಳು ಜಿ–ಸೂಟ್ ಧರಿಸಿದ್ದರು. ಹೆಲ್ಮೆಟ್ ಹಿಡಿದು ಸನ್ ಗ್ಲಾಸ್ ಧರಿಸಿ, ಮುರ್ಮು ಪೈಲಟ್ ಜೊತೆ ಛಾಯಾಚಿತ್ರಗಳಿಗೆ ಪೋಸ್ ನೀಡಿದ್ದಾರೆ. ಬೆಳಿಗ್ಗೆ 11.27 ಕ್ಕೆ ವಿಮಾನ ಹಾರುವ ಮೊದಲು, ರಾಷ್ಟ್ರಪತಿಗಳು ವಿಮಾನದ ಒಳಗಿನಿಂದ ಕೈ ಬೀಸಿದರು. ಇಂದು ಬೆಳಿಗ್ಗೆ ವಾಯುಪಡೆ ನಿಲ್ದಾಣಕ್ಕೆ ಆಗಮಿಸಿದಾಗ,ರಾಷ್ಟ್ರಪತಿಗಳಿಗೆ ಗೌರವ ವಂದನೆ ಸಲ್ಲಿಸಲಾಗಿದೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಫೇಲ್‌ನ ವಿಶೇಷತೆಗಳ ಬಗ್ಗೆ ವಾಯುಪಡೆಯ ಅಧಿಕಾರಿಗಳಿಂದ ಮಾಹಿತಿ ಪಡೆದರು. ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎಪಿ ಸಿಂಗ್ ಸೇರಿದಂತೆ ಅನೇಕ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು. ರಾಷ್ಟ್ರಪತಿ ಮುರ್ಮು ವಾಯುಪಡೆಯ ಸಮವಸ್ತ್ರದಲ್ಲಿ ರಫೇಲ್‌ನಲ್ಲಿ ಹಾರಾಟ ನಡೆಸಿದ್ದಾರೆ.

ರಾಷ್ಟ್ರಪತಿಗಳು ರಫೇಲ್‌ನಲ್ಲಿ ಹಾರಾಟ ನಡೆಸಿದ್ದು ಇದೇ ಮೊದಲು. ಅವರ ಈ ನಡೆ ಸೇನೆಯ ಮನೋಸ್ಥೈರ್ಯವನ್ನು ಹೆಚ್ಚಿಸುತ್ತದೆ ಎಂದು ಹೇಳಲಾಗುತ್ತಿದೆ. ಹಾರಾಟದ ಸಮಯದಲ್ಲಿ, ಅಧ್ಯಕ್ಷ ಮುರ್ಮು ಅವರು ತಮ್ಮ ಕೈ ಬೀಸುವ ಮೂಲಕ ಹಾಜರಿದ್ದ ಜನರನ್ನು ಸ್ವಾಗತಿಸಿದ್ದಾರೆ.ಇದಕ್ಕೂ ಮೊದಲು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು

ಏಪ್ರಿಲ್ 8, 2023 ರಂದು ಅಸ್ಸಾಂನ ತೇಜ್‌ಪುರ ವಾಯುಪಡೆ ನಿಲ್ದಾಣದಿಂದ ಸು–ಖೋಯ್–30 ಎಂಕೆಐ ಯುದ್ಧ ವಿಮಾನವನ್ನು ಹಾರಿಸಿದ್ದಾರೆ, ಈ ಮೂಲಕ ದೇಶದ ಮೂರನೇ ರಾಷ್ಟ್ರಪತಿಯಾದರು. ಮಾಜಿ ರಾಷ್ಟ್ರಪತಿಗಳಾದ ಎ.ಪಿ.ಜೆ. ಅಬ್ದುಲ್ ಕಲಾಂ ಮತ್ತು ಪ್ರತಿಭಾ ಪಾಟೀಲ್ ಅವರು ಕ್ರಮವಾಗಿ ಜೂನ್ 8,2006 ಮತ್ತು ನವೆಂಬರ್ 25,2009 ರಂದು ಪುಣೆ ಬಳಿಯ ಲೋಹೆಗಾಂವ್ ವಾಯುಪಡೆ ನಿಲ್ದಾಣದಿಂದ ಸುಖೋಯ್–30 ಎಂಕೆಐ ಯುದ್ಧ ವಿಮಾನವನ್ನು ಹಾರಿಸಿದರು.

ಈ ನಡೆ ಸೇನೆಗೆ ಮನೋಸ್ಥೈರ್ಯ ಹೆಚ್ಚಿಸುವಂತಿದ್ದು, ಭಾರತೀಯ ವಾಯುಪಡೆಯ ಸಾಮರ್ಥ್ಯದ ಸಂದೇಶವನ್ನು ರವಾನಿಸುತ್ತದೆ. ಇದು ಮಹಿಳಾ ಸಬಲೀಕರಣವನ್ನೂ ಸೂಚಿಸುತ್ತದೆ.

ಫ್ರೆಂಚ್ ಏರೋಸ್ಪೇಸ್ ಕಂಪನಿಯಿಂದ ತಯಾರಿಸಲ್ಪಟ್ಟ ರಫೇಲ್ ಯುದ್ಧ ವಿಮಾನಗಳನ್ನು ಸೆಪ್ಟೆಂಬರ್ 2020 ರಲ್ಲಿ ಅಂಬಾಲಾ ವಾಯುಪಡೆ ನಿಲ್ದಾಣದಲ್ಲಿ ಭಾರತೀಯ ವಾಯುಪಡೆಗೆ ಔಪಚಾರಿಕವಾಗಿ ಸೇರಿಸಲಾಯಿತು. ಮೊದಲ ಐದು ರಫೇಲ್ ಜೆಟ್‌ಗಳನ್ನು 17 ನೇ ಸ್ಕ್ವಾಡ್ರನ್, ಗೋಲ್ಡನ್ ಆರೋಸ್‌ಗೆ ಸೇರಿಸಲಾಗಿದೆ.

ಈ ವಿಮಾನಗಳು ಜುಲೈ 27, 2020 ರಂದು ಫ್ರಾನ್ಸ್‌ನಿಂದ ಬಂದವು. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಆಪರೇಷನ್ ಸಿಂದೂರ್ ಅನ್ನು ನಡೆಸುವಲ್ಲಿ ರಫೇಲ್ ಯುದ್ಧ ವಿಮಾನಗಳು ಪ್ರಮುಖ ಪಾತ್ರ ವಹಿಸಿದವು.

# ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ 1,82,000 ಜನರಿಗೆ ದಂಡ–ವಿ.ಎಸ್.ಉಗ್ರಪ್ಪ

**ಪ್ರಜಾ ನಾಯಕ ಬಳ್ಳಾರಿ :**

ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನವನ್ನು ನಿಷೇಧಿಸುವ, "ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ನಿಯಂತ್ರಣ ಕಾಯ್ದೆ, 2003 ಅಡಿಯಲ್ಲಿ ಏಪ್ರಿಲ್ ನಿಂದ ಸೆಪ್ಟೆಂಬರ್–2025 ತಿಂಗಳವರೆಗೆ ಸುಮಾರು 1,82,000 ಜನರು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘನೆ ಮಾಡಿರುವರ ವಿರುದ್ಧ ಕ್ರಮಕೈಗೊಂಡು ದಂಡ ವಿಧಿಸಲಾಗಿದೆ ಎಂದು ಮಹಿಳೆ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ,ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಅಧ್ಯಕ್ಷರಾದ ವಿ.ಎಸ್. ಉಗ್ರಪ್ಪ ತಿಳಿಸಿದ್ದಾರೆ.

ಅವರು ಇತ್ತೀಚೆಗೆ ಮಹಿಳೆ ಮತ್ತು ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದ ಅವರು, ಶಾಲಾ/ಕಾಲೇಜುಗಳಲ್ಲಿ 100 ಮೀ. ವ್ಯಾಪ್ತಿಯಲ್ಲಿ 2470 ಜನರು ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘನೆ ಮಾಡಿದವರಿಗೆ ದಂಡ ವಿಧಿಸಲಾಗಿದೆ. ಇದರಿಂದಾಗಿ ರೂ. 45 ಲಕ್ಷ ಪ್ರತಿ ವರ್ಷ ದಂಡ ಸಂಗ್ರಹವಾಗುತ್ತಿದೆ.

ಈ ಪೈಕಿ, 21 ವರ್ಷದೊಳಗಿನ ಯುವಜನರ ದತ್ತಾಂಶವನ್ನು ನೀಡಲು ಆರೋಗ್ಯ ಇಲಾಖೆಗೆ ಸೂಚಿಸಿದರು.

21 ವರ್ಷದೊಳಗಿನ ಯುವಜನರನ್ನು ಧೂಮಪಾನ, ಮದ್ಯಪಾನ, ತಂಬಾಕು ಸೇವನೆ, ಡ್ರಗ್ಸ್ ಸೇವೆಯಂತಹ ಮಾದಕ ವಸ್ತುಗಳ ಸೇವನೆಯಿಂದ ವ್ಯಸನ ಮುಕ್ತರನ್ನಾಗಿಸಲು ಮಾದಕ ವಸ್ತು ವ್ಯಸನ ಮುಕ್ತ ಕೇಂದ್ರಗಳ ಮೂಲಕ ಏಪ್ರಿಲ್ ನಿಂದ ಸೆಪ್ಟೆಂಬರ್–2025ರವರೆಗೆ ಸುಮಾರು 1 ಲಕ್ಷ ಯುವಜನರಿಗೆ ಸಮಾಲೋಚನೆಯನ್ನು ನೀಡಲಾಗುತ್ತಿದೆ.

ಆರೋಗ್ಯ ಇಲಾಖೆ ಮತ್ತು ನಿಮಾನ್ಸ್ ಸಹಯೋಗದಲ್ಲಿ ಟೆಲಿಮಾನಸ್ 14416 ಸಹಾಯವಾಣಿಯನ್ನು ತೆರೆಯಲಾಗಿದೆ. ಈ ಸಹಾಯವಾಣಿ ಮೂಲಕ ಮಾದಕ ವ್ಯಸನ ಪೀಡಿತ ಮಕ್ಕಳ ಮುಂದಿನ ಭವಿಷ್ಯವನ್ನು ಈ ಸುಧಾರಿಸಲು ಅಗತ್ಯ ಸಹಾಯ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಕುರಿತು



ಸಮಾಲೋಚನೆಯನ್ನು ಪಡೆಯಬಹುದಾಗಿದೆ. ದೃಶ್ಯ ಮಾಧ್ಯಮಗಳು ಅತ್ಯಾಚಾರ,ಮಹಿಳಾ ದೌರ್ಜನ್ಯ ಆತ್ಮಹತ್ಯೆ ಮತ್ತು ಇತರ ಪ್ರಕರಣಗಳನ್ನು ವೈಭವೀಕರಿಸಿ ಭಯಗೊಳ್ಳುವಂತೆ ಪ್ರಸಾರ ಮಾಡುವುದನ್ನು ನಿಯಂತ್ರಿಸಬೇಕು.

ಪ್ರೆಸ್ ಕೌನ್ಸಿಲ್ ಮಾರ್ಗಸೂಚಿಗಳನ್ನು ದೃಶ್ಯ ಮಾಧ್ಯಮಗಳು ಅಳವಡಿಸಿಕೊಳ್ಳಬೇಕು. ಯಾರು ಈ ರೀತಿಯ ಪ್ರಕರಣಗಳಿಗೆ ಪ್ರಚಾರ ನೀಡುತ್ತಾರೋ ಅವರ ಮೇಲೆ ಮಹಿಳೆಯರ ಅಸಭ್ಯ ಪ್ರಾತಿನಿಧ್ಯ(ನಿಷೇಧ) ಕಾಯ್ದೆ–1986 (Indescent Representation of Women (Prohibition) Act-1986) ರಡಿ ಸ್ವಯಂ ಪ್ರೇರಿತವಾಗಿ ಕ್ರಮವನ್ನು ದೃಶ್ಯ ಮಾಧ್ಯಮಗಳು ತೆಗೆದುಕೊಳ್ಳಬೇಕು. ಅಥವಾ ಕೇಬಲ್ ಆಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮವಹಿಸಲು, ಅಥವಾ ಫಿಲ್ಮ್ ಆಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮ ವಹಿಸಲು, ಪತ್ರಿಕೋದ್ಯಮಕ್ಕೆ ಸಂಬಂಧಿಸಿದ್ದರೆ ಪತ್ರಿಕೋದ್ಯಮ ಕಾಯಿದೆಯಡಿ ಕ್ರಮವಹಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಬೇಕು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಮಹಿಳಾ ಆಯೋಗ ಹಾಗೂ ವಿವಿಧ ಇಲಾಖೆಯೊಂದಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕೆಂದು ಸೂಚಿಸಲಾಯಿತು.

# ಅನಾಮಧೇಯ ಶವ ಪತ್ತೆ

**ಪ್ರಜಾನಾಯಕ ದಾವಣಗೆರೆ :**

ಹರಿಹರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಎಕ್ಕೆಗೊಂದಿ ಗ್ರಾಮದ ಹತ್ತಿರ ಹರಿಹರ ಶಿವಮೊಗ್ಗ ರಾಜ್ಯ ಹೆದ್ದಾರಿಯಲ್ಲಿ ರಸ್ತೆ ಅಪಘಾತವಾಗಿ ಮೃತಪಟ್ಟಿರುತ್ತಾರೆ. ವ್ಯಕ್ತಿಯ ಚಹರೆ: ಸುಮಾರು 5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ತೆಳ್ಳನೆಯ ಮೈಕಟ್ಟು, ಕೋಲುಮುಖ, ಬಿಳಿಕೂದಲು ಹೊಂದಿರುತ್ತಾರೆ. ಕೆಂಪು ಹಸಿರುಬಣ್ಣದ ಸೀರೆ, ಕೆಂಪು ಜಾಕೆಟ್ ಧರಿಸುತ್ತಾರೆ. ಈ ವ್ಯಕ್ತಿಯ ವಾರಸುದಾರರ ಮಾಹಿತಿ ಸಿಕ್ಕಲ್ಲಿ ದೂ.ಸಂ:08192–253100, 268785, 272018, 262550, 9480803234, 9480803222 ನೀಡಬೇಕೆಂದು ಪೊಲೀಸ್ ವೃತ್ತ ನಿರೀಕ್ಷಕರು ತಿಳಿಸಿದ್ದಾರೆ.

ಪ್ರಜಾನಾಯಕ ಬೆಂಗಳೂರು :

## ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ: ಪರೀಕ್ಷಾ ಅಕ್ರಮಗಳ ಕುರಿತು

# ಜಾಗರೂಕರಾಗಿರಿ-ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ

**ಪ್ರಜಾನಾಯಕ ದಾವಣಗೆರೆ :** ನವೆಂಬರ್ 2 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಹಾಯ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆಸೆಟ್) ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಈ ಸಂದರ್ಭದಲ್ಲಿ ಖಜಾನೆ ಅಧಿಕಾರಿ, ಮಾರ್ಗಾಧಿಕಾರಿಗಳು, ಪರೀಕ್ಷಾ ಕೇಂದ್ರ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕರು ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ನಿರ್ವಹಣೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಹೇಳಿದರು.

ಈ ಕುರಿತು ಬುಧವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ನಗರದ 21 ಕೇಂದ್ರಗಳಲ್ಲಿ ಬೆಳಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ ನಡೆಯಲಿದೆ. ಒಟ್ಟು 9710 ಅಭ್ಯರ್ಥಿಗಳು 19 ವಿವಿಧ ವಿಷಯಗಳಿಗೆ ಪರೀಕ್ಷೆ ಎದುರಿಸಲಿದ್ದಾರೆ.

ಈ ವೇಳೆ ಯಾವುದೇ ಪರೀಕ್ಷಾ ಅಕ್ರಮಗಳು ನಡೆಯದಂತೆ ಜಾಗರೂಕತೆ ವಹಿಸಬೇಕು. ಪರೀಕ್ಷಾ ಕೇಂದ್ರ ಸುತ್ತ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹೊರಡಿಸಿರುವ ಪರೀಕ್ಷಾ ನಿಯಮಗಳನ್ನು ತಪ್ಪದೇ ಪಾಲಿಸಬೇಕು ಎಂದು ಹೇಳಿದರು.

ಅಭ್ಯರ್ಥಿಗಳು ಪರೀಕ್ಷಾ ಕೇಂದ್ರ-ಕ್ಕೆ ತೆರಳು ಮುಂಚೆ ಸೂಕ್ತವಾಗಿ ತಪಾಸಣೆ ನಡೆಸಬೇಕು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹೊರಡಿಸಿರುವ ವಸ್ತ್ರ ಸಹಿಂತೆಯನ್ನು ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸಬೇಕು.

ಮೊಬೈಲ್ ಸೇರಿದಂತೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ ವಸ್ತುಗಳನ್ನು ಪರೀಕ್ಷಾ ಕೇಂದ್ರಕ್ಕೆ ತರುವಂತಿಲ್ಲ. ಹಾಗೆಯೇ ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯ ಸಿಬ್ಬಂದಿಗಳನ್ನು ನೇಮಿಸುವಂತೆ ತಿಳಿಸಿದ ಅವರು, ಪರೀಕ್ಷಾ ಕೇಂದ್ರಗಳಲ್ಲಿ ಶೌಚಾಲಯ, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ತಾಕೀತು ಮಾಡಿದರು. ಪರೀಕ್ಷಾ ಕಾರ್ಯದಲ್ಲಿ ಲೋಪ ಕಂಡುಬಂದರೆ ಸಂಬಂಧಪಟ್ಟವರ ಮೇಲೆ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಚ್ಚರಿಕೆ ನೀಡಿದರು.

ಪರೀಕ್ಷಾ ಕಾರ್ಯಕ್ಕೆ ಈಗಾಗಲೇ ಸುಗಮ ರೀತಿಯಲ್ಲಿ ನಡೆಸುವ ಸಲುವಾಗಿ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಪರೀಕ್ಷಾ ಕಾರ್ಯಕ್ಕೆ 24 ಅಭ್ಯರ್ಥಿಗಳ ಕೊಠಡಿಗೆ ಒಬ್ಬರಂತೆ 21 ವೀಕ್ಷಣಗಾರ, ಹಾಗೂ ತಾಲೂಕು ಮಟ್ಟದ ಅಧಿಕಾರಿಗಳ ನೇತೃತ್ವದಲ್ಲಿ 6 ಮಾರ್ಗಾಧಿಕಾರಿಗಳ ತಂಡ ನೇಮಿಸಲಾಗಿದೆ. ಈಗಾಗಲೇ ಪರೀಕ್ಷಾ ಪ್ರವೇಶ ಪತ್ರದಲ್ಲಿ ಅಭ್ಯರ್ಥಿಗಳಿಗೆ ಪರೀಕ್ಷಾ ಕೇಂದ್ರಗಳ ವಿವರ ಹಾಗೂ ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಅಂಧ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಅಗತ್ಯ ಸಾಧನ, ಸಲಕರಣೆ ಒದಗಿಸಲಾಗುವುದು ಎಂದು ಪದವಿ ಪೂರ್ವ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

### ಪರೀಕ್ಷಾ ಕೇಂದ್ರಗಳ ಸುತ್ತ 144 ಸೆಕ್ಷನ್ ಜಾರಿ

ನವೆಂಬರ್ 2 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಕೆ-ಸೆಟ್ ಅರ್ಹತಾ ಪರೀಕ್ಷೆ ನಡೆಯಲಿದ್ದು, ಅಂ-ದು ನಗರದ ಎಲ್ಲಾ ಪರೀಕ್ಷಾ ಕೇಂದ್ರಗಳ ಸುತ್ತಲೂ 200ಮೀ ಸಾರ್ವಜನಿಕ ನಿಷೇಧಿತ ಪ್ರದೇಶವೆಂದು ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಲೂ ಇರುವ ಜೆರಾಕ್ಸ್ ಅಂಗಡಿ ಹಾಗೂ ಸೈಬರ್ ಕೇಂದ್ರಗಳನ್ನು ಪರೀಕ್ಷಾ ಅವಧಿಯಲ್ಲಿ ತೆರೆಯುವಂತಿಲ್ಲ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಆದೇಶಿಸಿದ್ದಾರೆ.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೇರಿದಂತೆ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

## ಕೊಟ್ಟೂರಿನಲ್ಲಿ ದಿ|| ನಟ ಪುನೀತ್ ರಾಜಕುಮಾರ ಪುಣ್ಯ ಸ್ಮರಣೆ



**ಪ್ರಜಾನಾಯಕ ಕೊಟ್ಟೂರು :** ಪಟ್ಟಣದ ಗಾಂಧಿ ಸರ್ಕಲ್ ಮುಂಭಾಗದಲ್ಲಿ ನಡೆದ ಕರ್ನಾಟಕ ರತ್ನ, ದಿವಂಗತ ನಟ ಪುನೀತ್ ರಾಜಕುಮಾರ್ ಅವರ 4ನೇ ವರ್ಷದ ಪುಣ್ಯ ಸ್ಮರಣೆ ಅಂಗವಾಗಿ ಎಂಎಂಜೆ ಹರ್ಷವರ್ಧನ್,ಸುಧಾಕರ್ ಗೌಡ್ರು, ಮತ್ತು ಅಪ್ಪು ಅಭಿಮಾನಿ ರಾಂಪುರದ ಪ್ರಕಾಶ್ ಹಾಗೂ ಬಳಗದವರಿಂದ ಜ್ಯೋತಿ ಬೆಳಗುವುದರ ಮೂಲಕ ನಟ ಪುನೀತ್ ರಾಜ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಎಂಎಂಜೆ. ಹರ್ಷವರ್ಧನ್ ಮಾತನಾಡಿ, ನಟ ಪುನೀತ್ ರಾಜಕುಮಾರ್ ಈ ಸಮಾಜಕ್ಕೆ ನೀಡಿದ ಕೊಡುಗೆ ಅತ್ಯಂತ ಮಹತ್ವವಾದದ್ದು, ಇವರ ನಿಸ್ವಾರ್ಥ ಸೇವೆಯಂತೆ ಇವರ ಅಪ್ಪಟ ಅಭಿಮಾನಿ ಆರ್. ಪ್ರಕಾಶ್ ಕೂಡ ಉನ್ನತ ಕೆಲಸ ಕಾರ್ಯಗಳನ್ನು ಮಾಡುತ್ತಿದ್ದಾರೆ. ಯಾರ ಸಹಾಯವಿಲ್ಲದೆ ಈ ತರಹದ ಸಮಾಜಮುಖಿ ಕೆಲಸಗಳನ್ನು ತೊಡಗಿಸಿಕೊಂಡಿರುವುದು ಒಳ್ಳೆಯ ಬೆಳವಣಿಗೆ ಎಂದು ಹೇಳಿದರು.

ಮುಖಂಡ ಸುಧಾಕರ್ ಗೌಡ್ರು ರವರು ಮಾತನಾಡಿ, ಈ ವ್ಯವಸ್ಥೆಯಲ್ಲಿ ಯಾರಾದರೂ ಯಾರಿಗಾದರೂ ಸಹಾಯ ಮಾಡಿದರೆ ಅದು ದೊಡ್ಡ ಜಾಹಿರಾತು ಆಗಿರುತ್ತೆ. ಯಾವುದನ್ನು ಅಪೇಕ್ಷ ಪಡೆಯದೆ ಯಾರಿಗೆ ತಿಳಿಯದ ಹಾಗೇ ಮನಪೂರ್ವಕವಾಗಿ ಸಹಾಯ ಮಾಡುವ ಮಹಾನ್ ನಟ ಎಂದರೆ ಪುನೀತ್ ರಾಜಕುಮಾರ್ ಮಾತ್ರ ಇವರನ್ನು ಸ್ಮರಿಸುವಂತಹ ಕಾರ್ಯಗಳನ್ನು ಮಾಡಲು ಮುಂದಾಗಿರುವ ಕಲ್ಮಶ ವಿಲ್ಲದ ಅಭಿಮಾನಿ ಎಂದರೆ ಅದು ಆರ್. ಪ್ರಕಾಶ್, ಇವರು ಕೊಟ್ಟೂರಿನ ಅಪ್ಪು ಎಂದು ಹೇಳಲು ಹೆಮ್ಮೆ ಅನಿಸುತ್ತಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ಬುಕ್ ಮತ್ತು



ಪೆನ್ನು ವಿತರಿಸಿ, ಸಾರ್ವಜನಿಕರಿಗೆ ಪ್ರಸಾದ ವ್ಯವಸ್ಥೆಯನ್ನು ಮಾಡಲಾಯಿತು ಮತ್ತು ಸ್ನೇಹಲೋಕ ಮೆಲೋಡಿಸ್ ಸಂಗೀತ ರವರಿಂದ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಈ ಸಂದರ್ಭದಲ್ಲಿ ದಿ ಪ್ರೆಸ್ಟಿನ್ ಸ್ಕೂಲ್ ಮುಖ್ಯಸ್ಥ ಎಂಎಂಜೆ ಶೋಬಿತ್, ರುದ್ರಮ್ಮ ಜೋಗಿತಿ, ಬೂದಿ ಶಿವಕುಮಾರ್, ಕೊಟ್ರೇಶ್ ಗೌಡ್ರು, ಅಪ್ಪು ಅಭಿಮಾನಿ ಬಳಗದವರಾದ ರಾಂಪುರದ ಪ್ರಕಾಶ್, ಬಿ.ರಾಜ, ಎಲ್ ಕೊಟ್ರೇಶ್, ಅಪ್ಪಣ್ಣ, ಬಿ.ಗಿರಿ,ಬೇವುರ್. ವಿರೇಶ್, ಸಚಿನ್, ಕೊಟ್ರೇಶ್, ಮುಂತಾದವರು ಇದ್ದರು.

## ಇಂಗ್ಲೀಷ್ ಭಾಷಾ ಪ್ರೌಢಿಮೆ ಹೊಂದಿದ್ದರೆ ಐಎಎಸ್, ಐಪಿಎಸ್ ಕಷ್ಟವಾಗದು

# ಜಿ.ಬಿ. ವಿನಯ್ ಕುಮಾರ್ ಅಭಿಮತ

**ಪ್ರಜಾನಾಯಕ ದಾವಣಗೆರೆ :** ದಾವಣಗೆರೆ: ಇಂಗ್ಲೀಷ್ ಭಾಷೆ ಬರುವುದಿಲ್ಲ ಎಂಬ ಕಾರಣಕ್ಕೆ ಎಷ್ಟೋ ವಿದ್ಯಾರ್ಥಿಗಳು ಐಎಎಸ್, ಐಪಿಎಸ್ ನಂಥ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಗಳಿಸಲು ಸಾಧ್ಯವಾಗುತ್ತಿಲ್ಲ. ಇಂಗ್ಲೀಷ್ ಭಾಷಾ ಪ್ರೌಢಿಮೆ ಹೊಂದಿದರೆ ಉನ್ನತ ಹುದ್ದೆ ಅಲಂಕರಿಸಲು ಕಷ್ಟವಾಗದು. ಹಾಗಾಗಿ, ಇಂಗ್ಲೀಷ್ ಕಬ್ಬಿಣದ ಕಡಲೆ ಅಲ್ಲ. ಕಲಿಯಲು ಆಸಕ್ತಿ ಬೇಕು ಅಷ್ಟೇ ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ಅಭಿಪ್ರಾಯಪಟ್ಟರು.

ಜಿಲ್ಲೆಯ ಹರಿಹರ ತಾಲೂಕಿನ ಶ್ರೀಮತಿ ಗಿರಿಯಮ್ಮ ಆರ್. ಕಾಂತಪ್ಪ ಶ್ರೇಷ್ಠಿ ಮಹಿಳಾ ಪ್ರಥಮ ಮತ್ತು ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ ಹಾಗೂ ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಐಎಎಸ್, ಕೆಎಎಸ್ ಹಾಗೂ ಸ್ಪರ್ಧಾತ್ಮಕ



ಪರೀಕ್ಷೆಗಳ ತಯಾರಿ ಕುರಿತು ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಹಾಗೂ ಮಾರ್ಗದರ್ಶಕರಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಯಾರೂ ಸಂಪನ್ಮೂಲ ಬಳಸಿಕೊಳ್ಳುತ್ತಾರೋ ಅವರಿಗೆ ಯಶಸ್ಸು ಬೇಗ ಸಿಗುತ್ತದೆ. ನಮ್ಮ ಕಣ್ಣುಂದೆ ಇರುವ ಅವಕಾಶಗಳನ್ನು ಯಾವುದೇ ಕಾರಣ-ಕ್ಕೂ ಬಿಡಬಾರದು. ಇಂಗ್ಲೀಷ್ ಬರಲ್ಲ ಎಂಬ ಕೀಳರಿಮೆಯಿಂದ ಹೊರ ಬನ್ನಿ. ತುಂಬಾ ವಿದ್ಯಾರ್ಥಿಗಳು ಇಂಗ್ಲೀಷ್ ಭಾಷೆ ಕಲಿಯಲ್ಲ, ನಾನು ಇದರಲ್ಲಿ ದುರ್ಬಲವಾಗಿದ್ದೇನೆಂದುಕೊಂಡು ಸುಮ್ಮನಾಗಿಬಿಡುತ್ತಾರೆ. ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಂಡರೂ ಯಶ ಸಾಧಿಸಲು ಆಗದು ಎಂದು ತಿಳಿಸಿದರು.

ಇಂದಿನ ದಿನಗಳಲ್ಲಿ ಒಂದೂ ದಿನ ಹಳ್ಳಿ ನೋಡದವರು, ಜೀವನ ಸಾಗಿಸದೇ ಇರುವವರು, ಹಸಿವು, ಅವಮಾನ ಅನುಭವಿಸದೇ ಇರುವವರು ಅಧಿಕಾರಕ್ಕೆ ಬರುತ್ತಾರೆ. ಅಧಿಕಾರ ಸಿಕ್ಕಾಗ ನಿಮ್ಮ ಕೈಗೆ ಸಿಗಲ್ಲ. ಇಂಥ ಪರಿಸ್ಥಿತಿಯಲ್ಲಿ ನಾವಿದ್ದೇವೆ. ಸರ್ಕಾರದ ಅನುಕೂಲ ಸೌಲಭ್ಯ ಮತ್ತು ಹಕ್ಕು ಪಡೆಯಲು ನಿಮ್ಮನ್ನು ಕಾಡಿಸುತ್ತಾರೆ. ನೀವು ಉನ್ನತ ಸ್ಥಾನಕ್ಕೆ ಬಂದರೆ ಇನ್ನೊಬ್ಬರ ಮುಂದೆ ಅಪಮಾನ ಎದುರಿಸುವ, ಗುಲಾಮಗಿರಿಯಂತೆ ಬದುಕುವ ಪ್ರಮೇಯವೇ ಎದುರಾಗದು ಎಂದು ತಿಳಿಸಿದರು.

ಎಸ್ಸಿ, ಎಸ್ಟಿ, ಒಬಿಸಿ, ಅಲ್ಪಸಂಖ್ಯಾತರಿಗೆ ಐಎಎಸ್ ಓದಲು ಸರ್ಕಾರವೇ ನೆರವು ನೀಡುತ್ತದೆ. ಪ್ರತಿತಿಂಗಳೂ ಹಣ ನಿಗದಿಪಡಿಸಿ ಕೊಡುತ್ತದೆ. ಹಾಗಾಗಿ, ಇದರ ಸೌಲಭ್ಯ ಪಡೆದುಕೊಳ್ಳಿ. ನಮ್ಮ ಸಂಸ್ಥೆಗೆ ಬಂದ-ರೆ ಎಸ್ಸಿ, ಎಸ್ಟಿ, ಬಡವರು, ಆರ್ಥಿಕವಾಗಿ ದುರ್ಬಲವಾಗಿರುವವರಿಗೆ ಉಚಿತವಾಗಿ ಕೋಚಿಂಗ್ ನೀಡುತ್ತೇವೆ. ಇದಕ್ಕೆ ಸುಮಾರು ಒಂದೂವರೆ ಲಕ್ಷ ರೂಪಾಯಿ ವೆಚ್ಚ ತಗುಲುತ್ತದೆ. ಇದುವರೆಗೆ ನೂರಾರು ಬಡ ವಿದ್ಯಾರ್ಥಿಗಳಿಗೆ ಫ್ರೀಯಾಗಿ ಕೋಚಿಂಗ್ ನೀಡುತ್ತಿದ್ದೇವೆ. ನಿಮ್ಮ ಕೈಯಲ್ಲಾದಷ್ಟು ಶುಲ್ಕ ಪಾವತಿಸಿ. ಅತಿ ಕಡಿಮೆ ವೆಚ್ಚದಲ್ಲಿ ಕೋಚಿಂಗ್ ನೀಡುತ್ತೇವೆ ಎಂದು ವಿನಯ್ ಕುಮಾರ್ ಅವರು ಭರವಸೆ ನೀಡಿದರು.

ರೀಲ್ಸ್ ನೋಡುವುದು, ಬಿಗ್ ಬಾಸ್ ಸೇರಿದಂತೆ ಹೆಚ್ಚಿನ ಮನರಂಜನೆಗೆ ಆದ್ಯತೆ ನೀಡುತ್ತಾರೆ. ಇಷ್ಟೇ ಸಮಯವನ್ನು ಓದಿನತ್ತ, ಪುಸ್ತಕಗಳ ಅಧ್ಯಯನ ಬಗ್ಗೆ ಸಮಯ ನೀಡಿ. ಮನರಂಜನೆಗೆ ಕಡಿಮೆ ಅವಧಿ ಕೊಟ್ಟು ಓದಿನತ್ತ ಹೆಚ್ಚಿನ ಗಮನ ಕೊಡಿ ಎಂದು ಅವರು ಸಲಹೆ ನೀಡಿದರು. ಕಾಲೇಜಿನ ಪ್ರಾಂಶುಪಾಲ ಡಾ. ಶ್ರೀನಿವಾಸ್ ಅಜ್ಜೂರು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಡಿಎಸ್ಎಸ್ ಸಂಚಾಲಕ ಪಿ. ಜೆ. ಮಹಾಂತೇಶ್, ಸಮಾಜ ಸೇವಕ ಬಿ. ಮಗ್ದುಮ್, ಬಟ್ಟಲಕಟ್ಟೆಯ ಪರಶುರಾಮ್,ಬೊಧಕಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು. ಇದೇ ವೇಳೆ ಜಿ.ಬಿ.ವಿನಯ್ ಕುಮಾರ್ ಅವರನ್ನು ಸನ್ಮಾನಿಸಲಾಯಿತು

## ಗ್ರಾಹಕ ಅಕಾಲಿಕ ಸಾವು : ಕೆನರಾ ಬ್ಯಾಂಕಿನಿಂದ 2 ಲಕ್ಷ ಪರಿಹಾರ ವಿತರಣೆ



**ಪ್ರಜಾನಾಯಕ ಜಗಳೂರು :** ತಾಲ್ಲೂಕಿನ ಅಣಬೂರು ಗ್ರಾಮದಲ್ಲಿ ಈಚೆಗೆ ಅಕಾಲಿಕವಾಗಿ ಮರಣ ಹೊಂದಿದ ಎಚ್.ಪಿ. ಮಂಜುನಾಥ್ ಅವರ ಕುಟುಂಬಕ್ಕೆ ಪ್ರಧಾನ ಮತ್ರಿ ಜೀವನಜ್ಯೋತಿ ವಿಮಾ ಯೋಜನೆಯಡಿ (ಪಿಎಂಜೆಜೆಬಿವೈ) ಕೆನರಾಬ್ಯಾಂಕ್ ವತಿಯಿಂದ ಬುಧವಾರ ರೂ.2ಲಕ್ಷ ಮೊತ್ತದ ಚೆಕ್ ವಿತರಿಸಲಾಯಿತು.

ಎಚ್.ಬಿ. ಮಂಜುನಾಥ್ ಅವರು ಅಣಬೂರು ಕೆನರಾಬ್ಯಾಂಕ್ ನಲ್ಲಿ ತಮ್ಮ ಉಳಿತಾಯ ಖಾತೆಯಲ್ಲಿ ಪಿಎಂಜೆಜೆಬಿಯೋಜನೆಯಡಿ ರೂ.436 ಕಂತು ಮೊತ್ತವನ್ನು ಪಾವತಿಸಿದ್ದರು.

ಇದೇ ಅಕ್ಟೋಬರ್ 28ರಂದು ಅಕಾಲಿಕವಾಗಿ ಮರಣ ಹೊಂದಿದ್ದರು. ಮೃತರ ಪತ್ನಿ ಸುವರ್ಣ ಅವರಿಗೆ ಕೆನರಾ ಬ್ಯಾಂಕ್ ವ್ಯವಸ್ಥಾಪಕ ಹಣಮಂತ ಬೈಗೊಂಡ ಅವರು ಶಾಖೆಯಲ್ಲಿ ರೂ.2 ಲಕ್ಷ ಪರಿಹಾರದ ಚೆಕ್ ವಿತರಿಸಿದರು.

18ರಿಂದ 50ರ ವಯೋಮಾನದ ಯಾವುದೇ ವ್ಯಕ್ತಿಗಳು ತಮ್ಮ ಬ್ಯಾಂಕ್ ಖಾತೆಗಳ ಮೂಲಕ ಪಿಎಂಜೆಜೆಬಿಯೋಜನೆಯಡಿ ವಾರ್ಷಿಕ ರೂ.436 ಕಂತು ಪಾವತಿಸಿದಲ್ಲಿ ಆ ವ್ಯಕ್ತ ಸಾವನ್ನಪ್ಪಿದರೆ ಅವರ ಕುಟುಂಬಕ್ಕೆ ರೂ. 2ಲಕ್ಷ ಪರಿಹಾರ ಸಿಗಲಿದೆ.

ಆದರೆ ಮೃತಪಟ್ಟ ದಿನಾಂಕದಿಂದ 30 ದಿನಗಳ ಒಳಗಾಗಿ ಖಾತೆ ಇರುವ ಬ್ಯಾಂಕಿಗೆ ಅಗತ್ಯ ದಾಖಲೆಗಳನ್ನು ಒದಗಿಸಿದಲ್ಲಿ ತಕ್ಷಣವೇ ರೂ.2ಲಕ್ಷ ಹಣ ಪಡೆಯಬಹುದಾಗಿದೆ.

ಮೃತ ಎಚ್.ಬಿ. ಮಂಜುನಾಥ್ ಅವರ ಖಾತೆಯನ್ನು ಪರಿಶೀಲಿಸಿದಾಗ ಅವರು ವಿಮಾ ಕಂತು ಪಾವತಿಸಿರುವುದು ಕಂಡು ಬಂದಿತು. ಕೂಡಲೇ ಅವರ ಕುಟುಂಬಕ್ಕೆ ತಿಳಿಸಿ ದಾಖಲೆ ಪಡೆದು ಇಂದು ಪರಿಹಾರ ನೀಡಲಾಗಿದೆ ಎಂದು ಅಣಬೂರು ಕೆನರಾ ಬ್ಯಾಂಕ್ ವ್ಯವಸ್ಥಾಪಕ ಹಣಮಂತ ಬೈರಗೊಂಡ ತಿಳಿಸಿದರು.

ಜಗಳೂರು ತಾಲ್ಲೂಕಿನ ಅಣಬೂರು ಗ್ರಾಮದಲ್ಲಿ ಗ್ರಾಹಕ ಅಕಾಲಿಕವಾಗಿ ಮೃತಪಟ್ಟಿದ್ದು, ಕೆನರಾಬ್ಯಾಂಕ್ ವ್ಯವಸ್ಥಾಪಕ ಹಣಮಂತ ಬೈರಗೊಂಡ ಅವರು ಮೃತರ ಪತ್ನಿಗೆ ಬುಧವಾರ ರೂ.2 ಲಕ್ಷ ಮೊತ್ತದ ವಿಮೆ ಪರಿಹಾರ ಚೆಕ್ ವಿತರಿಸಿದರು.

## ವೃದ್ದೆ ಸಾವು : ವಾರಸುದಾರರ ಪತ್ತೆಗೆ ಮನವಿ

**ಪ್ರಜಾನಾಯಕ ದಾವಣಗೆರೆ :** ನಗರದ ಸಿ.ಜಿ. ಆಸ್ಪತ್ರೆಯ ನಿರ್ಗತಿಕರ ವಾರ್ಡ್‌ನಲ್ಲಿ ಜಯಮ್ಮ ಗಂಡ ಶಾಂತಪ್ಪ ಶಾಮನೂರು ಸುಮಾರು 67ವರ್ಷದ ವೃದ್ದೆ ಮರಣ ಹೊಂದಿದ್ದು, ವಾರಸುದಾರರು ಇಲ್ಲದ ಕಾರಣ ಬಡಾವಣೆ ಪೊಲೀಸ್ ಠಾಣೆಯಲ್ಲಿ ಅಕ್ಟೋಬರ್ 25ರಂದು ಪ್ರಕರಣ ದಾಖಲಿಸಲಾಗಿದೆ.

ಮೃತ ವೃದ್ದೆ ಜಯಮ್ಮ ಗಂಡ ಶಾಂತಪ್ಪ ಶಾಮನೂರು, ಸುಮಾರು 4.9 ಅಡಿ ಎತ್ತರ, ಕೋಲು ಮುಖ, ತೆಳುವಾದ ಮೈಕಟ್ಟು, ಗೋಧಿ ಬಣ್ಣ, ತಲೆಯಲ್ಲಿ ಸುಮಾರು 5 ಇಂಚು ಉದ್ದದ ಬಿಳಿ ಕೂದಲು ಹೊಂದಿದ್ದು, ಎಡಗೈ ಮುಂಗೈಯಲ್ಲಿ "ಓಂ" ಎಂಬ ಅಚ್ಚೆ ಗುರುತು ಇದೆ. ಮರಣ ಹೊಂದಿರುವ ಸಂದರ್ಭದಲ್ಲಿ ಬಾದಾಮಿ ಮತ್ತು ಗುಲಾಬಿ ಕಲರ್ ಮಿಶ್ರಿತ ಹೂವಿನ ಸೀರೆ ಧರಿಸಿರುತ್ತಾರೆ.

ಈ ಮೇಲ್ಕಂಡ ವೃದ್ದೆಯ ವೃದ್ದೆಯ ರಕ್ತ ಸಂಬಂಧಿಕರು ಅಥವಾ ವಾರಸುದಾರರು ಪತ್ತೆಯಾದಲ್ಲಿ ಬಡಾವಣೆ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ನಂ. 9480803249, ಠಾಣೆ ಫೋನ್ ನಂ. 08192-272012, ಡಿವೈಎಸ್‌ಪಿ ನಗರ ಕಚೇರಿ 08192-259213, ಎಸ್.ಪಿ ಕಚೇರಿ 08192-253400, ಕಂಟ್ರೋಲ್ ರೂಂ ನಂ. 08192-253100 ಗೆ ಸಂಪಕಿಸಲು ಬಡಾವಣೆ ಠಾಣೆ ಪೊಲೀಸ್ ನಿರೀಕ್ಷಕರು ತಿಳಿಸಿದ್ದಾರೆ.

ಕೆಲಸಗಳು ತಂತಾನೆ ಪ್ರಗತಿಯಾಗುತ್ತವೆ. ಸಾರ್ವಜನಿಕರು ಕಚೇರಿಗಳಿಗೆ ಬಂದಾಗ ಆರಿಕೆಯ ಉತ್ತರ ನೀಡುವ ಮೂಲಕ ಸರ್ವಾಧಿಕಾರಿಗಳಂತೆ ವರ್ತಿಸಬಾರದು. ಅವರೊಂದಿಗೆ ಸೌಮ್ಯಯುತ ಹಾಗೂ ಸೌಜನ್ಯದಿಂದ ವರ್ತಿಸಬೇಕು. ಇಲ್ಲಿ ಜನಪ್ರತಿನಿಧೀಗಳು, ಸಚಿವರು, ಶಾಸಕರು ಹಾಗೂ ಅಧಿಕಾರಿಗಳು ಹೀಗೆ ಎಲ್ಲರನ್ನೂ ಒಳಗೊಂಡ ಪ್ರಜಾಪ್ರಭುತ್ವವೇ ಆಡಳಿತ.

ಎಲ್ಲರೊಂದಿಗೆ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಿದಲ್ಲಿ ಯಾವುದೇ ತಪ್ಪುಗಳು ಆಗುವುದಿಲ್ಲ. ಈ ನೆಲೆಗಟ್ಟಿನಲ್ಲಿ ಕಾರ್ಯನಿರ್ವಹಿಸಿದಾಗ ಮಾತ್ರ ಕಾರ್ಯಕ್ರಮಕ್ಕೆ ಅರ್ಥ ಸಿಗಲಿದೆ ಎಂದರು.ಇದೇ ಸಂದರ್ಭದಲ್ಲಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್.ಕೌಲಾಪುರೆ ಪ್ರತಿಜ್ಞಾವಿಧಿ ಬೋಧಿಸಿದರು. ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿ.ಪಂ. ಸಿಇಓ ಗಿತ್ತೆ ಮಾಧವ ವಿಠಲ ರಾವ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಲಯ ಮಹಾವೀರ ಮ.ಕರೆಣ್ಣವರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ವ್ಯಕ್ತಿ ಕಾಣೆ

**ಪ್ರಜಾನಾಯಕ ದಾವಣಗೆರೆ :** ದಾವಣಗೆರೆ ಅ.29 (ಕರ್ನಾಟಕ ವಾರ್ತೆ)- ಮಲೇಬೆನ್ನೂರು ಪೊಲೀಸ್ ಠಾಣೆಯ ವ್ಯಾಪ್ತಿಯ ಪೇಟೆ ಬೀದಿ, ಜಿಯೋ ಆಫೀಸ್ ಹತ್ತಿರ ವಾಸದ ಅಜಯ್ ಕುಮಾರ್ ಬಿನ್ ನರಾರಾಮ್ 32 ವರ್ಷ, ಇವರು ಕಳೆದ ಸೆ.27 ರಂದು ಮನೆಯಿಂದ ಹೋದವರು ವಾಪಾಸ್ ಬಂದಿರುವುದಿಲ್ಲ ಚಹರೆ ವಿವರ ಇಂತಿದೆ. 5.5 ಅಡಿ ಎತ್ತರ, ಕೋಲು ಮುಖ ರಾಜಸ್ಥಾನಿ ಮತ್ತು ಹಿಂದಿ ಮಾತನಾಡುತ್ತಾನೆ ಎಂದು ಮಲೇಬೆನ್ನೂರು ಪೊಲೀಸ್ ಠಾಣೆಯ ಪ್ರಕಟಣೆ ತಿಳಿಸಿದೆ.

## ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರಧ್ವಜಾರೋಹಣ

(ಮೊದಲಪುಟದಿಂದ) ಕೆ.ಎಸ್.ನವೀನ್,ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್,ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಅಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರಾದ ಎನ್ ಜಯದೇವನಾಯ್ಕ್, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಹೆಚ್.ಬಿ ಮಂಜಪ್ಪ, ಕರ್ನಾಟಕ ಜೀವ ವೈವಿಧ್ಯ ಮಂಡಳಿಯ ಅಧ್ಯಕ್ಷರಾದ ವಡ್ನಾಳ್ ಜಗದೀಶ್, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಹೆಚ್ ಮರಿಯೋಜಿರಾವ್, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾದವ್ ವಿಠ್ಠಲರಾವ್ ಉಪಸ್ಥಿತರಿರುವರು. ನವೆಂಬರ್ 1 ರಂದು ಸಂಜೆ 5.30ಕ್ಕೆ ನಗರದ ಕುವೆಂಪು ಕನ್ನಡ ಭವನದಲ್ಲಿ ವಿವಿಧ ಶಾಲಾ, ಕಾಲೇಜಿನ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

## ನ.28ರಂದು ಕರ್ನಾಟಕಕ್ಕೆ ಪ್ರಧಾನಿ ನರೇಂದ್ರ ಮೋದಿ ಭೇಟಿ

**ಪ್ರಜಾ ನಾಯಕ ಉಡುಪಿ :** ಬಿಹಾರ ಚುನಾವಣಾ ಅಖಾಡ ರಂಗೇರಿದೆ. ಸದ್ಯ ಇದೇ ಚುನಾವಣಾ ಪ್ರಚಾರದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ನವೆಂಬರ್ 28ರಂದು ಉಡುಪಿ ಶ್ರೀಕೃಷ್ಣ ಮಠಕ್ಕೆ ಭೇಟಿ ನೀಡಲಿದ್ದಾರೆ. ಶ್ರೀಕೃಷ್ಣ ಮಠದಲ್ಲಿ ನಡೆಯಲಿರುವ ಲಕ್ಷ ಕಂಠ ಗೀತಾ ಪಾರಾಯಣ- ಬೃಹತ್ ಗೀತೋತ್ಸವದಲ್ಲಿ ಭಾಗಿಯಾಗಲಿದ್ದಾರೆ ಎಂದು ಮಠದ ಮೂಲಗಳಿಂದ ಮಾಹಿತಿ ಬಂದಿದೆ.




ಸುಗುಣೇಂದ್ರ ತೀರ್ಥ ಶ್ರೀಪಾದರೊಂದಿಗೆ ಮೋದಿ ಮಾತುಕತೆ ನವೆಂಬರ್ 28ರಂದು ಮಧ್ಯಾಹ್ನ 12 ಗಂಟೆಗೆ ಶ್ರೀಕೃಷ್ಣ ಮಠಕ್ಕೆ ಆಗಮಿಸುವ ಪ್ರಧಾನಿ ಮೋದಿ, ಪ್ರಸಾದ ಸ್ವೀಕರಿಸಿದ ಬಳಿಕ ಪರ್ಯಾಯ ಪುತ್ತಿಗೆ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರೊಂದಿಗೆ ಮಾತುಕತೆ ನಡೆಸಲಿದ್ದಾರೆ.

ಬಳಿಕ ಶ್ರೀಕೃಷ್ಣ ಮಠದಲ್ಲಿ ನಡೆಯಲಿರುವ ಲಕ್ಷ ಕಂಠ ಗೀತಾ ಪಾರಾಯಣ-ಬೃಹತ್ ಗೀತೋತ್ಸವದಲ್ಲಿ ಪ್ರಧಾನಿ ಮೋದಿ ಭಾಗಿಯಾಗಲಿದ್ದಾರೆ. ಈ ನಿಟ್ಟಿನಲ್ಲಿ ಭಕ್ತರು ಮತ್ತು ಗಣ್ಯರು ಬೃಹತ್ ಪ್ರಮಾಣದಲ್ಲಿ ಸೇರುವ ನಿರೀಕ್ಷೆಯಿದೆ

**Printed by :** M. NAGARAJA,**Published and Owned by** : H. BABU, **Printed at** : MANJU MUDRANA ,Kunduvada Kere Road, Near Kadappa Bavi, Davangere -577006, Davangere Dist, Karnataka **Published at** : At No .89, Marenahalli – 577528, Jagalur Town, Davangere Dist, Karnataka. **Editor** : H. BABU.